ಸಂಪುಟ : 9 ಸಂಚಿಕೆ 146 ಪುಟ : 4 ಬೆಲೆ: 3.00 ರವಿವಾರ ಜುಲೈ 14 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 146 Pages : 4 Price : 3.00 Sunday July 14 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಅಂಬಿಗ ಚೌಡಯ್ಯನವರ ಕುರಿತು ಉಪನ್ಯಾಸ ಇಂದು




**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜುಲೈ 14ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1602ನೇ ಶರಣ ಸಂಗಮದಲ್ಲಿ ನಿಜಶರಣ ಅಂಬಿಗ ಚೌಡಯ್ಯನವರ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಗದಗ-ಬೆಟಗೇರಿ ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ತತ್ವ ಚಿಂತಕ ಎಸ್.ಎ. ಮುಗದ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಸಮಗಾರ ಹರಳಯ್ಯನವರು ಸಮಾಜದ ದೊಡ್ಡ ಶಕ್ತಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಸಮತಾ ಸೇನಾ ಗದಗ ಜಿಲ್ಲಾ ವತಿಯಿಂದ ಮಹಾ ಶಿವಶರಣ ಶ್ರೀ ಸಮಗಾರ ಹರಳಯ್ಯನವರ 857ನೇ ಜಯಂತ್ಯುತ್ಸವವನ್ನು ಗದಗ ನಗರದ ಟಾಂಗಾಕೂಟ ವೃತ್ತದಲ್ಲಿ ಆಚರಿಸಲಾಯಿತು.

ಈ ಕಾರ್ಯಕ್ರಮ ಉದ್ಘಾಟಿಸಿದ ಕಾನೂನು, ಸಂಸದೀಯ ಹಾಗೂ ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ ಮಾತನಾಡಿ, ಶಿವಶರಣ ಶ್ರೀ ಸಮಗಾರ ಹರಳಯ್ಯನವರು 12ನೇ ಶತಮಾನದಲ್ಲಿ ಬಸವಣ್ಣನವರ ಅನುಭವ ಮಂಟಪದಲ್ಲಿ ಪ್ರಮುಖರಾಗಿದ್ದರು. ಸಮಗಾರ ಹರಳಯ್ಯನವರ ಸಮಾಜದವರಿಗೆ ಇವರು ದೊಡ್ಡ ಶಕ್ತಿಯಾಗಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಮತಾ ಸೇನಾ ರಾಜ್ಯಾಧ್ಯಕ್ಷ ಗುರು ಉಳ್ಳಿಕಾಶಿ ಮಾತನಾಡಿ, 12ನೇ ಶತಮಾನದಲ್ಲಿಯೇ ಬಸವಣ್ಣನವರ ಅನುಭವ ಮಂಟಪದಲ್ಲಿ ಎಲ್ಲಾ ಸಮಾಜದ, ಅದರಲ್ಲಿಯೂ ಅತ್ಯಂತ ಹಿಂದುಳಿದ ಮತ್ತು ಅಸ್ಪ್ರಶ್ಯ ಸಮಾಜದವರಿಗೆ ಸಮಾನತೆ ನೀಡಿ ಆತ್ಮವಿಶ್ವಾಸವನ್ನು ತುಂಬಿದ ಬಸವಣ್ಣನವರ ಕಾರ್ಯ ಇಂದಿಗೂ ಪ್ರಸ್ತುತವಾಗಿದೆ ಎಂದರು.

ಯುವ ಮುಖಂಡ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಇಂದಿನ ಯುವಕರು ಶರಣರ ಸಂಸ್ಕೃತಿಯನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಈ ಜಾತಿ ಪದ್ಧತಿಯನ್ನು ಕಿತ್ತೊಗೆಯಲು ಸಾಧ್ಯ ಎಂದರು.

ಸಮತಾ ಸೇನಾ ಜಿಲ್ಲಾ ಅಧ್ಯಕ್ಷ ಕಿರಣ ಗಾಮನಗಟ್ಟಿ ಮಾತನಾಡಿದರು. ಈ ಸಂದರ್ಭದಲ್ಲಿ ಪೀರಸಾಬ ಕೌತಾಳ, ಲೋಹಿತ ಗಾಮನಗಟ್ಟಿ, ಕಲ್ಪನಾ ಹೊನಕೇರಿ, ಮಂಜುನಾಥ ಕೊರವರ, ಸತೀಶ ಮಂಡಲಗೇರಿ, ವಿಜಯ ಗಾಮನಗಟ್ಟಿ, ಸಮಗಾರ ಹರಳಯ್ಯ ಹಿರಿಯರಾದ ಪ್ರೇಮನಾಥ ಗರಗ, ದಶರಥ ಅಗಸಿಮನಿ, ಮಂಜುನಾಥ ಟಗಟರ, ಪ್ರಕಾಶ ಹೊನಕೇರಿ, ಪರಶುರಾಮ ನರಗುಂದ, ನಾಗರಾಜ ಕುಂದರಗಿ, ರೇವಣಸಿದ್ದಪ್ಪ ಮೆಳ್ಳಣ್ಣವರ, ಶ್ರೀಧರ ಅಗಸಿಮನಿ, ವೀರೇಶ ಮುದೇನಗುಡಿಮಠ, ರಮೇಶ ತೇರದಾಳ, ರಮೇಶ ಬೆಣಗಿ, ಗೋಪಾಲ ಅಗಸಿಮನಿ, ಪರಶುರಾಮ ಲಕ್ಕುಂಡಿ, ಯಲ್ಲಪ್ಪ ಉಳ್ಳಿಕಾಶಿ, ಮಂಜುನಾಥ ತೇರದಾಳ, ರವಿ ಅಗಸಿಮನಿ, ವಿನಾಯಕ ಅಗಸಿಮನಿ, ಗಿಡ್ಡಪ್ಪ ತೇರದಾಳ, ಪ್ರಕಾಶ ಕಮಡೊಳ್ಳಿ, ಈಶ್ವರ ಮುಂಡರಗಿ ಮುಂತಾದವರು ಉಪಸ್ಥಿತರಿದ್ದರು.

### ಜೆ.ಟಿ. ಮಹಾವಿದ್ಯಾಲಯದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಅಭಿಮತ

## ಮಕ್ಕಳಲ್ಲಿ ಪ್ರಶ್ನಿಸುವ ಮನೋಭಾವ ಬೆಳೆಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಧಾನಮಂತ್ರಿಗಳು ಜಾರಿಗೆ ತಂದಿರುವ ನೂತನ ಶಿಕ್ಷಣ ನೀತಿ ಜಾರಿಗೆ ಬಂದರೆ ನಮ್ಮ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಶನಿವಾರ ಗದಗ ಪಟ್ಟಣದ ಜೆ.ಟಿ. ಮಹಾವಿದ್ಯಾಲಯದಲ್ಲಿ ಕರ್ನಾಟಕ ರಾಜ್ಯ ಪದವಿಪೂರ್ವ ಮಹಾವಿದ್ಯಾಲಯಗಳ ನೌಕರರ ಸಂಘ ಧಾರವಾಡ, ಜಿಲ್ಲಾ ಘಟಕ ಗದಗ ಮತ್ತು ಉದ್ಯೋಗ ಮಾಹಿತಿ ಹಾಗೂ ತರಬೇತಿ ಕೇಂದ್ರ ಹುಬ್ಬಳ್ಳಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಪ್ರತಿಭೆಗಳನ್ನು ಗುರುತಿಸುವ ಹಾಗೂ ಸನ್ಮಾನಿಸುವ ಕೆಲಸ ಅತ್ಯಂತ ಮಹತ್ವದ್ದು. ಸಮಾಜಕ್ಕೆ ಒಳ್ಳೆಯದನ್ನು ಮಾಡಿದರೆ, ಸಮಾಜ ಅದನ್ನು ಮೆಚ್ಚಿಕೊಂಡರೆ ಅದಕ್ಕಿಂತ ಒಳ್ಳೆಯ ಕೆಲಸ ಇನ್ನೊಂದಿಲ್ಲ. ಒಬ್ಬ ವೃದ್ಧೆಯನ್ನು ರಸ್ತೆಯ ಒಂದು ಬದಿಯಿಂದ ಇನ್ನೊಂದು ಬದಿಗೆ ದಾಟಿಸಿನೋಡಿ. ಅದರಿಂದ ಸಿಗುವ ಸಂತೃಪ್ತಿಯೇ ಬೇರೆ. ಅದು ಇನ್ನಷ್ಟು ದೊಡ್ಡ ಕೆಲಸ ಮಾಡಲು ಪ್ರೇರಣೆ ನೀಡುತ್ತದೆ. ಒಬ್ಬ ಪಾಶ್ಚಿಮಾತ್ಯ ತತ್ವಜ್ಞಾನಿ ನಿನ್ನ ಜೀವನದ ಅತ್ಯಂತ ಮಹತ್ವದ ಘಳಿಗೆ ಯಾವುದೆಂದರೆ ನಾನು ನನಗಾಗಿ ಕಳೆದ ಸಮಯವೇ ನನಗೆ ಅತ್ಯಂತ ಮಹತ್ವದ ಘಳಿಗೆ, ಎಲ್ಲರಿಗಿಂತ ದೊಡ್ಡ ಗೆಳೆಯ ನಮ್ಮೊಳಗೇ ಇದ್ದಾನೆ ಎಂದರು.



ಒಮ್ಮೆ ವಿದ್ಯಾರ್ಥಿಯಾದರೆ ಸಾಯುವವರೆಗೂ ವಿದ್ಯಾರ್ಥಿಯಾಗಿರುತ್ತಾನೆ. ಶಾಲೆಯಲ್ಲಿ ಮೊದಲು ಪಠ್ಯ ಕಲಿತು ನಂತರ ಪರೀಕ್ಷೆ ಬರೆಯಬೇಕು. ಜೀವನದಲ್ಲಿ ಮೊದಲು ಪರೀಕ್ಷೆ ಬರೆದು ಪಾಠ ಕಲಿಯಬೇಕು. ಹೀಗಾಗಿ ಎರಡು ಥರದ ಕಲಿಕೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ನಿರಂತರ ಯಶಸ್ಸಿನಿಂದ ಸಮಾಜಕ್ಕೆ ಒಳ್ಳೆಯದಾದರೆ ಅವನು ಸಾಧಕನಾಗುತ್ತಾನೆ. ನಮ್ಮಲ್ಲಿರುವ ಶಿಕ್ಷಣ ಪದ್ಧತಿಯಲ್ಲಿ ಡಿಗ್ರಿಗೆ ಮಹತ್ವ ಕೊಡುತ್ತೇವೆ. ಇಂತಹ ಕೆಲಸವನ್ನು ಇಂತಹ ಡಿಗ್ರಿ ಓದಿದವರು ಮಾಡಬೇಕೆಂಬ ನಿಯಮ ಮಾಡಿಕೊಂಡಿದ್ದೇವೆ. ಆರ್ಟ್ಸ್ ಕಲಿತವರು ಆರ್ಟ್ಸ್ ಟೀಚರ್ ಆಗಬೇಕು, ಕಾಮರ್ಸ್ ಕಲಿತವರು ಬ್ಯಾಂಕ್ ಉದ್ಯೋಗಿ ಆಗಬೇಕು ಎನ್ನುವ ನಿಯಮ ಹಾಕಿಕೊಂಡಿದ್ದೇವೆ. ನಮ್ಮ ಪ್ರಧಾನ ಮಂತ್ರಿಗಳು ನೂತನ ಶಿಕ್ಷಣ ನೀತಿ ಜಾರಿಗೆ ತಂದಿದ್ದು, ಆರ್ಟ್ಸ್ ಓದುತ್ತ ಕಾಮರ್ಸ್ ಓದಬಹುದು ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಸೇರಿದಂತೆ ಕಾಲೇಜು ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮಕ್ಕಳಲ್ಲಿ ಪ್ರಶ್ನೆ ಕೇಳುವ ಮನೋಭಾವನೆ ಬೆಳೆಸಬೇಕು. ಯಾಕೆ, ಏನು ಎಂಬ ಪ್ರಶ್ನೆ ಮಾಡುವ ಮನೋಭಾವನೆ ಬೆಳೆದರೆ ಜಗತ್ತು ತಾನಾಗಿಯೇ ಅರ್ಥವಾಗುತ್ತದೆ. ಯಾವುದು ಕಠಿಣ ಇದೆಯೋ ಅದನ್ನು ತಿಳಿದುಕೊಳ್ಳುವುದು ಒಂದು ಭಾಗವಾದರೆ, ಅದನ್ನು ಇನ್ನೊಬ್ಬರಿಗೆ ತಿಳಿಸಿವುದು ಇನ್ನೊಂದು ಭಾಗ. ಎಲ್ಲವನ್ನೂ ಬಾಯಿಪಾಠ ಮಾಡುವುದೇ ಜೀವನ ಆಗಿದೆ. ನನ್ನ ಪ್ರಕಾರ ಯುಪಿಎಸ್ಸಿ ಪರೀಕ್ಷಾ ಪದ್ಧತಿ ಬದಲಾಗಬೇಕು. ನಾನು ಸಾಕಷ್ಟು ಐಎಎಸ್ ಅಧಿಕಾರಿಗಳನ್ನು ನೋಡಿದ್ದೇನೆ. ಆಳುವುದು ಬೇರೆ, ಆಡಳಿತ ಮಾಡುವುದೇ ಬೇರೆ, ಈಗ ಆಳುವವರು ಆಡಳಿತ ಮಾಡಲು ಹೊರಟಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟರು.



### ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

## ಕಾಂಗ್ರೆಸ್ ಸರಕಾರ ಶಿಕ್ಷಣಕ್ಕೆ ಆದ್ಯತೆ ನೀಡುತ್ತಿದೆ

**■ ವಿಜಯಸಾಕ್ಷಿ ಸುದ್ದಿ, ನರೇಗಲ್**

ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರಕಾರ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಎಲ್ಲರೂ ಶಿಕ್ಷಣ ಕಲಿಯಲಿ ಎಂಬ ಆಸೆ ಸಿದ್ದರಾಮಯ್ಯ ನೇತೃತ್ವದ ಸರಕಾರಕ್ಕಿದೆ. ಆದ್ದರಿಂದ ಅಂಗನವಾಡಿ, ಶಾಲೆ ಮತ್ತಿರ ಕಟ್ಟಡಗಳ ನಿರ್ಮಾಣಕ್ಕೆ ಅನುದಾನವನ್ನು ಬಿಡುಗಡೆ ಮಾಡುತ್ತಿದೆ ಎಂದು ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ 12 ಮತ್ತು 13ನೇ ವಾರ್ಡಿನಲ್ಲಿ ನಿರ್ಮಾಣಗೊಳ್ಳಲಿರುವ ಅಂಗನವಾಡಿ ಕಟ್ಟಡಗಳಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಪಟ್ಟಣದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳಾಗಬೇಕಿದ್ದರೂ ಅದಕ್ಕೆ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ಪಟ್ಟಣದ ಸಾರ್ವಜನಿಕರು ಅಭಿವೃದ್ಧಿ ಕಾರ್ಯಳಿಗೆ ಸೂಕ್ತ ಸಹಕಾರ ನೀಡಿದರೆ ನರೇಗಲ್ ಪಟ್ಟಣವನ್ನು ಸುಂದರ ಪಟ್ಟಣವನ್ನಾಗಿಸಲು ನಾನು ಕಂಕಣಬದ್ಧನಾಗಿದ್ದೇನೆ ಎಂದು ಪಾಟೀಲ ಹೇಳಿದರು.



ಪಟ್ಟಣಕ್ಕೆ ನೂತನಾಗಿ ಆರು ಅಂಗನವಾಡಿ ಕೇಂದ್ರಗಳ ಕಟ್ಟಡ ಮಂಜೂರಾಗಿವೆ. ಈಗಾಗಲೇ ಅದರಲ್ಲಿ ಮೂರಕ್ಕೆ ಅನುದಾನ ಬಂದಿದ್ದು, ಒಂದು ಕೋಡಿಕೊಪ್ಪದಲ್ಲಿ ಮತ್ತು ಇನ್ನೆರಡು ಕಟ್ಟಡಗಳ ಕಾರ್ಯ ಆರಂಭವಾಗುತ್ತಿದೆ. ರೈತಾಪಿ ಜನರ ಮಕ್ಕಳ ಶಿಕ್ಷಣಕ್ಕೂ ಸರಕಾರ ಆದ್ಯತೆ ನೀಡುತ್ತಿದೆ. ಆದ್ದರಿಂದ ರೈತರು ತಮ್ಮ ಮಕ್ಕಳನ್ನು ಹೆಚ್ಚಿನ ಓದಿಗೆ ಪ್ರೇರೇಪಿಸಬೇಕು. ಪಟ್ಟಣದಿಂದ ತೊಂಡಿಹಾಳ ಸಂಪರ್ಕಿಸುವ ರಸ್ತೆ ಸಂಪೂರ್ಣವಾಗಿ ಹಾಳಾಗಿದ್ದು, ಅದಕ್ಕಾಗಿ ವಿಶೇಷವಾದ ಅನುದಾನವನ್ನು ತಂದು ಕಾರ್ಯವನ್ನು ಶೀಘ್ರವೇ ಪ್ರಾರಂಭಿಸಲಾಗುವದೆಂದರು.

ನರೇಗಲ್ ಶಹರ ಘಟಕದ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು.

ವೇದಿಕೆಯ ಮೇಲೆ ಅಂದಪ್ಪ ಕಿರಟಗೇರಿ, ಭೀಮಪ್ಪ ಕಿರಟಗೇರಿ ವಾರ್ಡಿನ ಸದಸ್ಯರು ಇದ್ದರು. ಕಾರ್ಯಕ್ರಮದಲ್ಲಿ ಅಲ್ಲಾಭಕ್ಷಿ ನದಾಫ್, ಶೇಕಪ್ಪ ಕೆಂಗಾರ, ಮೈಲಾರಪ್ಪ ಚಳ್ಳಮರದ, ನಿಂಗನಗೌಡ ಲಕ್ಕನಗೌಡ್ರ, ಎಸ್‌ಟಿ ಘಟಕದ ಅಧ್ಯಕ್ಷ ಶೇಕಪ್ಪ ಜುಟ್ಲ, ಕಾಂಗ್ರೆಸ್ ಪಕ್ಷದ ಅನೇಕ ಕಾರ್ಯಕರ್ತರು, ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ರಮೇಶ ಹೊಸಮನಿ, ನಿರ್ಮಿತಿ ಕೇಂದ್ರದ ಅಭಿಯಂತರ ಪಾಟೀಲ, ಸಿಬ್ಬಂದಿಗಳು, ಅಂಗನವಾಡಿ ಕಾರ್ಯಕರ್ತೆಯರು, ಓಣಿಯ ಹಿರಿಯರು ಉಪಸ್ಥಿತರಿದ್ದರು.

ಪಟ್ಟಣದ ಬಸ್ ನಿಲ್ದಾಣದಿಂದ ಶ್ರೀ ಅನ್ನದಾನೇಶ್ವರ ಕಾಲೇಜುವರೆಗಿನ ರಸ್ತೆ ಸಂಪೂರ್ಣ ಹದಗೆಟ್ಟಿದ್ದು ಅದರ ದುರಸ್ತಿಯನ್ನೂ ಬೇಗ ಕೈಗೊಳ್ಳಲಾಗುವುದೆಂದು ಶಾಸಕರು ಈ ಸಂದರ್ಭದಲ್ಲಿ ತಿಳಿಸಿದರು. ಪಟ್ಟಣದಲ್ಲಿನ ಎಲ್ಲ ರಸ್ತೆಗಳನ್ನುಸಿಸಿ ರಸ್ತೆಗಳನ್ನು ಮಾಡುವುದರ ಜೊತೆಗೆ ಅವಶ್ಯವಿದ್ದಲ್ಲಿ ಮಹಿಳಾ ಶೌಚಾಲಯಕ್ಕೂ ಅನುಕೂಲ ಮಾಡಿಕೊಡಲಾಗುವುದು. ಹಿರೆಕೆ-ರೆಗೆ ನೀರು ತುಂಬಿಸುವ ಕಾರ್ಯಕ್ಕೆ ಚಾಲನೆ ನೀಡಲಾಗುವುದು. ನರೇಗಲ್ಲ ಪಟ್ಟಣ ಪಂಚಾಯಿತಿಗೆ ಮಂಜೂರಾಗಿರುವ 2 ಕೋಟಿ ರೂಪಾಯಿಗಳ ಅನುದಾನದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಲಾಗಿದೆ ಎಂದು ಶಾಸಕರು ಹೇಳಿದರು.

## ಪುನಃ ಒಂದಾದ 4 ಜೋಡಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಕೌಟುಂಬಿಕ ಕಾರಣಗಳಿಂದ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದ ನಾಲ್ಕು ಜೋಡಿಗಳು ಶನಿವಾರ ನಡೆದ ಲೋಕ ಅದಾಲತ್‌ನಲ್ಲಿ ರಾಜೀ ಸಂಧಾನದ ಮೂಲಕ ಮತ್ತೆ ಒಂದುಗೂಡಿದರು.

ಲೋಕ ಅದಾಲತ್‌ನಲ್ಲಿ ಸಮಸ್ಯೆಗಳನ್ನು ಪರಿಹರಿಸಿಕೊಂಡು ಒಂದಾದ ಜೋಡಿಗಳು ಪರಸ್ಪರ ಹಾರ ಬದಲಾಯಿಸಿಕೊಂಡು, ಸಿಹಿ ತಿನ್ನಿಸುವ ಮೂಲಕ ಸಂತಸ ಹಂಚಿಕೊಂಡರು. ನ್ಯಾಯಾಧೀಶರು ಮತ್ತು ನ್ಯಾಯವಾದಿಗಳು, ಆಪ್ತರು ಒಂದಾದ ಜೋಡಿಗೆ ಶುಭ ಹಾರೈಸಿ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಬಸವರಾಜ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ, ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶ ಕಾಶಿಂ ಚುರಿಖಾನ, ಖಾದರಸಾಬ್ ಬೆನಕಟ್ಟಿ, ವಕೀಲರ ಸಂಘದ ಜಿಲ್ಲಾಧ್ಯಕ್ಷ ಎಂ.ಐ. ಹಿರೇಮನಿಪಾಟೀಲ ಉಪಸ್ಥಿತರಿದ್ದರು.

### ಡೆಂಘೀ ಮುಂಜಾಗೃತಾ ಕ್ರಮ ಕೈಗೊಳ್ಳಲು ಜನರಲ್ಲಿ ಜಾಗೃತಿ ಮೂಡಿಸಿ: ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ

## ಡೆಂಘೀ ಜ್ವರದ ಕುರಿತು ಭಯ, ಆತಂಕ ಬೇಡ

**■ ವಿಜಯಸಾಕ್ಷಿ ಸುದ್ದಿ, ಗದಗ**

ಡೆಂಘೀ ಜ್ವರವು ಈಡಿಸ್ ಜಾತಿಯ ಸೊಳ್ಳೆಗಳ ಕಚ್ಚುವಿಕೆಯಿಂದ ಒಬ್ಬರಿಂದೊಬ್ಬರಿಗೆ ಹರಡುವ ರೋಗ. ಈ ಬಗ್ಗೆ ಮುಂಜಾಗೃತಾ ಕ್ರಮ ಕೈಗೊಳ್ಳಲು ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಿ ಎಂದು ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಆರೋಗ್ಯ ಇಲಾಖೆ ಸೇರಿದಂತೆ ಇತರೆ ಇಲಾಖೆಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಸಾರ್ವಜನಿಕರು ಡೆ-ಂಘೀ ಜ್ವರದ ಕುರಿತು ಭಯ ಹಾಗೂ ಆತಂಕಕ್ಕೆ ಒಳಗಾಗದೇ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಮೂಲಕ ಡೆಂಘೀ ಜ್ವರದಿಂದ ಸಂರಕ್ಷಿಸಿಕೊಳ್ಳಬೇಕು. ಡೆಂಘೀ ನಿಯಂತ್ರಣಕ್ಕಾಗಿ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಮುಖ್ಯವಾಗಿದೆ. ಈ ಕುರಿತು ಎಲ್ಲ ಇಲಾಖೆಗಳ ಅಧಿಕಾರಿಗಳು ಜನಜಾಗೃತಿ ಮೂಡಿಸುವ ಮೂಲಕ ಡೆಂಘೀ ನಿಯಂತ್ರಣಕ್ಕೆ ಮುಂದಗಬೇಕು ಎಂದರು.

ಈಡಿಸ್ ಸೊಳ್ಳೆಗಳು ಮನೆಯಲ್ಲಿರುವ ನೀರು ಶೇಖರಣೆಯ ತೊಟ್ಟಿ, ಬ್ಯಾರಲ್, ಡ್ರಮ್, ಹೂವಿನ ಕುಂಡ ಮುಂತಾದವುಗಳಲ್ಲದೇ ಮನೆ ಸುತ್ತಮುತ್ತ ಬಯಲಲ್ಲಿ ಬಿಸಾಡಿದ ಪಿಂಗಾಣಿ ವಸ್ತುಗಳು, ಪ್ಲಾಸ್ಟಿಕ್ ಕಪ್ಪುಗಳು, ಟೈರ್‌ಗಳು ಮತ್ತಿತರೆ ವಸ್ತುಗಳಲ್ಲಿ ನೀರು ಸಂಗ್ರಹವಾದಾಗ ಉತ್ಪತ್ತಿಯಾಗುತ್ತವೆ. ಇವುಗಳ ಸಂಪೂರ್ಣ ನಿಯಂತ್ರಣದ ಅರಿವನ್ನು ಜನರಲ್ಲಿ ಮೂಡಿಸಬೇಕು ಎಂದು ಇಲಾಖಾಧಿಕಾರಿಗಳಿಗೆ ಸೂಚನೆ ನೀಡಿದರು.

ಎರಡನೇ ಬಾರಿ ಡೆಂಘೀ ಬಾಧೆಗೆ ಒಳಗಾದವರು ಸ್ವಲ್ಪವೂ ನಿರ್ಲಕ್ಷ್ಯ ಮಾಡಬಾರದು. ಅದು ತೀವ್ರ ಸ್ವರೂಪಕ್ಕೆ ಹೋಗುವ ಸಾಧ್ಯತೆ ಅಧಿಕವಾಗಿದೆ. ತಕ್ಷಣ ಚಿಕಿತ್ಸೆ ಪಡೆದು ಆರೋಗ್ಯ ಸಂರಕ್ಷಣೆ ಮಾಡಿಕೊಳ್ಳಬೇಕು ಎಂದೂ ಜನಸಾಮಾನ್ಯರಿಗೆ ಅರಿವು ಮೂಡಿಸುವದನ್ನು ಮರೆಯಬಾರದು ಎಂದು ಹೇಳಿದರು.

▶▶ 3ನೇ ಪುಟಕ್ಕೆ

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಮಾತನಾಡಿ, ಜಿಲ್ಲೆಯಲ್ಲಿ ಜನವರಿಯಿಂದ ಇದುವರೆಗೆ 1479 ಡೆಂಘೀ ಸಂಶಯಾಸ್ಪದ ಪ್ರಕರಣಗಳು ಕಂಡುಬಂದಿದ್ದು, ಅದರಲ್ಲಿ 1102 ಪ್ರಕರಣಗಳನ್ನು ಪರೀಕ್ಷಿಸಲಾಗಿದೆ. 70 ಡೆಂಘೀ ಪ್ರಕರಣಗಳು ಖಚಿತಪಟ್ಟಿವೆ. 49 ಜನರಿಗೆ ಚಿಕಿತ್ಸೆ ನೀಡಲಾಗುತ್ತಿದೆ. 32 ಜನರಿಗೆ ಗದಗನ ಜಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. 12 ಜನ ಐಸಿಯುನಲ್ಲಿದ್ದಾರೆ. 2 ಜನರನ್ನು ವೆಂಟಿಲೇಟರ್‌ನಲ್ಲಿ ಇಡಲಾಗಿತ್ತು. ಅವರು ಕೂಡ ಈಗ ವೆಂಟಿಲೇಟರ್‌ನಿಂದ ಹೊರಬಂದಿದ್ದಾರೆ ಎಂದು ಮಾಹಿತಿ ಒದಗಿಸಿದರು.

## ಸಂಪಾದಕೀಯ

# ಭ್ರಷ್ಟಾಚಾರ ಸರ್ವವ್ಯಾಪಿ

ರಾಜ್ಯದ ಗ್ಯಾರಂಟಿ ಸರಕಾರ ವರ್ಷ ಪೂರೈಸುವುದರ ಒಳಗೆ ಭ್ರಷ್ಟಾಚಾರ, ಹಣಕಾಸಿನ ಹಗರಣಗಳು ಮುತ್ತಿಕೊಳ್ಳುತ್ತಿವೆ. ವಾಲ್ಮೀಕಿ ನಿಗಮದ ಹಣ ವರ್ಗಾವಣೆಯಿಂದ ಆರಂಭವಾದ ಈ ಸರಣಿ, ಮುಡಾ ಹಗರಣದಿಂದ ಈಗ ಪ್ರವಾಸೋದ್ಯಮ ಇಲಾಖೆಗೂ ವ್ಯಾಪಿಸಿದೆ.

ವಾಲ್ಮೀಕಿ ನಿಗಮದ ಹಗರಣದಲ್ಲಿ ನಾಗೇಂದ್ರ ಪಾತ್ರ ಇರುವುದು ಸ್ಪಷ್ಟವಾಗುತ್ತಿದೆ. ಇನ್ನು ಮುಡಾ ಹಗರಣದ ಬಗ್ಗೆ ತನಿಖೆ ನಡೆಯುತ್ತಿದೆ. ಪ್ರವಾಸೋದ್ಯಮ ಇಲಾಖೆಯ ಹಣ ವರ್ಗಾವಣೆ ಈಗಷ್ಟೆ ಬೆಳಕಿಗೆ ಬಂದಿದ್ದು, ಮುಂದಿನ ದಿನಗಳಲ್ಲಿ ಆ ಬಗ್ಗೆಯೂ ಸ್ಪಷ್ಟ ಮಾಹಿತಿ ಸಿಗಲಿದೆ.

ಇಂಥ ಹಗರಣಗಳು ನಡೆದಿರುವುದು ಮತ್ತು ಬಯಲಿಗೆ ಬಂದಿರುವುದು ಇದೇ ಮೊದಲೇನಲ್ಲ. ಕಾಂಗ್ರೆಸ್ ಭ್ರಷ್ಟಾಚಾರವನ್ನೇ ಬಂಡವಾಳ ಮಾಡಿಕೊಂಡು ಅಧಿಕಾರಕ್ಕೆ ಬಂದ ಬಿಜೆಪಿಯೂ ಭ್ರಷ್ಟಾಚಾರ ನಡೆಸಿ ಅಧಿಕಾರ ಕಳೆದುಕೊಂಡಿದ್ದನ್ನು ಕಂಡಿದ್ದೇವೆ. ಭ್ರಷ್ಟಾಚಾರ, ದುರಾಡಳಿತದ ವಿಷಯದಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ಮಧ್ಯೆ ಅಂಥ ದೊಡ್ಡ ಕಂದಕ ಕಾಣುತ್ತಿಲ್ಲ.

ಸದ್ಯ ಸರಕಾರದ ಪ್ರತಿನಿಧಿಗಳು ಭಾಗಿಯಾಗಿರುವ ಹಗರಣಗಳ ಮಧ್ಯೆಯೂ ಬಿಜೆಪಿ ಸರಕಾರದ ಅವಧಿಯಲ್ಲಾದ ಹಗರಣವೂ ಬಯಲಿಗೆ ಬಂದಿದೆ. ಡಿ. ದೇವರಾಜು ಅರಸು ಟ್ರಕ್ ಟರ್ಮಿನಲ್ ನಿಯಮಿತದ ಮಾಜಿ ಅಧ್ಯಕ್ಷ ಹಾಗೂ ಬಿಜೆಪಿ ಮುಖಂಡ ಡಿ.ಎಸ್. ವೀರಯ್ಯ ಸಹ ಪೊಲೀಸರ ಬಂಧನಕ್ಕೆ ಒಳಗಾಗಿದ್ದಾರೆ. ವಿಪರ್ಯಾಸ ಎಂದರೆ, ಮುಡಾ ಹಗರಣ ವಿರೋಧಿಸಿ ಬಿಜೆಪಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಲು ಹೋಗುತ್ತಿದ್ದ ಸಂದರ್ಭದಲ್ಲಿಯೇ ಪೊಲೀಸರು ಟ್ರಕ್ ಟರ್ಮಿನಲ್ ಹಗರಣದಲ್ಲಿ ವೀರಯ್ಯ ಅವರನ್ನು ಬಂಧಿಸಿದ್ದಾರೆ.

ಇದೆಲ್ಲವನ್ನು ಗಮನಿಸಿದರೆ ಭ್ರಷ್ಟಾಚಾರ ರಹಿತ ಆಡಳಿತ ಎನ್ನುವುದು ಕೇವಲ ಭಾಷಣದ ಸರಕು ಎನ್ನುವುದು ಸ್ಪಷ್ಟವಾಗುತ್ತದೆ. ಪ್ರತಿ ವಿಧಾನಸಭೆ, ಲೋಕಸಭೆ ಚುನಾವಣೆಯಲ್ಲೂ ಆಡಳಿತದಲ್ಲಿ ಪಾರದರ್ಶಕತೆ ತರುತ್ತೇವೆ, ಭ್ರಷ್ಟಾಚಾರ ರಹಿತ ಆಡಳಿತ ನೀಡುತ್ತೇವೆ, ಜನರ ಮನೆ ಬಾಗಿಲಿಗೆ ಸೌಲಭ್ಯಗಳನ್ನು ತಲುಪಿಸುತ್ತೇವೆ ಎನ್ನುತ್ತಲೆ ಮತಬೇಟೆ ಆರಂಭಿಸುತ್ತಾರೆ.


ದಶಕಗಳಿಂದಲೂ ಇಂಥ ಸವಕಲು ಭರವಸೆಗಳನ್ನು ನಂಬಿ ಜನ ಮತದಾನ ಮಾಡುತ್ತಾರೆ. ಚುನಾಯಿತರಾದ ನಂತರ ಮತ್ತೆ ಅದೇ ಕೆಲಸ ಮಾಡುತ್ತಾರೆ. ಆದರೂ ಚುನಾವಣೆ ಹತ್ತಿರ ಬಂದಾಗಲೆಲ್ಲಾ ರಾಜಕಾರಣಿಗಳಿಗೆ ಭ್ರಷ್ಟಾಚಾರ ರಹಿತ ಆಡಳಿತ ನೆನಪಾಗುತ್ತದೆ. ಇಂಥ ವ್ಯವಸ್ಥೆಯಿಂದ ಬದಲಾವಣೆ ಆಗಬೇಕಾದರೆ ಜನ ಬದಲಾಗಬೇಕು. ಇಲ್ಲದಿದ್ದರೆ ಈ ಭ್ರಷ್ಟಾಚಾರ ವ್ಯವಸ್ಥೆ ಆಡಳಿತದ ಒಂದು ಭಾಗ ಎನ್ನುವಷ್ಟರ ಮಟ್ಟಿಗೆ ಬದಲಾಗುತ್ತದೆ.

---

**ಜಕ್ಕಲಿಯ ಅಣ್ಣಯ್ಯ-ತಮ್ಮಯ್ಯನವರ 140ನೇ ಪುಣ್ಯಸ್ಮರಣೋತ್ಸವ ಇಂದು**

# ಆಧ್ಯಾತ್ಮಿಕ ಲೋಕದ ನಕ್ಷತ್ರಗಳು

ಆಧ್ಯಾತ್ಮಕವನ್ನು ತಮ್ಮಲ್ಲಿ ಬೆಳೆಸಿಕೊಂಡು ಆ ಮೂಲಕ ತಮ್ಮನ್ನು ನಂಬಿದ ಭಕ್ತರನ್ನು ಉದ್ಧಾರ ಮಾಡಿದ ಅನೇಕ ಸಾಧು-ಸಂತರಿಗೆ ಈ ಪುಣ್ಯಭೂಮಿ ಭಾರತದಲ್ಲಿ ಕೊರತೆ ಎಂಬುದಿಲ್ಲ. ಅಂತಹ ಅನೇಕ ಸಂತರ ಸಾಲಿನಲ್ಲಿ ನಿಲ್ಲುವವರು ಗದಗ ಜಿಲ್ಲೆ ರೋಣ ತಾಲೂಕಿನ ಅಣ್ಣಯ್ಯ-ತಮ್ಮಯ್ಯ ಶರಣರು.



ಜಕ್ಕಲಿಯಲ್ಲಿ ಕುದರಿ ಎಂಬ ಮನೆತನವೊಂದಿದೆ. ಈ ಮನೆತನದ ಪೂರ್ವಜರು ದೂರದ ಕಲಬುರ್ಗಿ ಜಿಲ್ಲೆಯ ಜಾಲಿಬೆಂಚಿ ಎಂಬ ಗ್ರಾಮದಿಂದ ಕುದುರೆಯನ್ನೇರಿ ಜಕ್ಕಲಿ ಗ್ರಾಮಕ್ಕೆ ಬಂದುದರಿಂದ ಅವರಿಗೆ ಕುದುರೆ ಮನೆತನದವರು ಎಂಬ ಅಡ್ಡ ಹೆಸರು ಶಾಶ್ವತವಾಯಿತು. ಈ ಮನೆತನದವರಿಗೆ ದೊಡ್ಡಮನಿ ಶೆಟ್ಟರು ಎಂಬ ಇನ್ನೊಂದು ಅಡ್ಡ ಹೆಸರೂ ಇದೆ. ಈ ಉಭಯ ಶೆಟ್ಟರ ಸಂಸ್ಮರಣೆಯ 140ನೇ ವರ್ಷದ ಆಚರಣೆಯು ಜುಲೈ 14ರಂದು ಜಕ್ಕಲಿಯ ಅವರ ಮನೆಯಲ್ಲಿ ಜರುಗಲಿದೆ.

ಅಣ್ಣಯ್ಯನವರಿಗಿಂತ ತಮ್ಮಯ್ಯನವರು ಒಂದು ಕೈ ಮೇಲಾಗಿದ್ದರು. ಚಿಕ್ಕ ಮಕ್ಕಳು ಆಡುವ ಕಟ್ಟಿಗೆಯ ಬಸವಣ್ಣನಲ್ಲಿ ಓಂಕಾರವನ್ನು ನಿಡಿಸಿದ ಮಹಮಹಿಮರು ಅವರಾಗಿದ್ದರು. ಒಮ್ಮೆ ಅಣ್ಣಯ್ಯನವರು ತಮ್ಮಯ್ಯನವರಿಗೆ ನಿಡಗುಂದಿ ಗ್ರಾಮದ ವ್ಯಕ್ತಿಗೆ ನೀಡಿದ್ದ ಸಾಲವನ್ನು ವಸೂಲು ಮಾಡಿಕೊಂಡು ಬರಲು ಕಳಿಸಿದ್ದರು. ಆಗ ಅವರು ನೀಡಿದ್ದ ಸಾಲ 20ರೂ.ಗಳು. ಸಾಲವನ್ನು ವಸೂಲು ಮಾಡಲು ಹೋದಾಗ ಅವರ ಮನೆಯಲ್ಲಿ ಏನನ್ನೂ ತಿನ್ನಬಾರದು ಮತ್ತು ಕುಡಿಯಬಾರದು ಎಂಬ ಷರತ್ತನ್ನು ವಿಧಿಸಿದ್ದರು. ಏಕೆಂದರೆ ಹಾಗೇನಾದರೂ ಸ್ವೀಕರಿಸಿದರೆ ಅವರ ಸಾಲ ಮುಟ್ಟಿದಂತೆಯೇ ಸರಿ ಎಂದೂ ಹೇಳಿ ಕಳಿಸಿದ್ದರು.

ಸಾಲ ವಸೂಲಿಗೆ ಬಂದ ತಮ್ಮಯ್ಯ ಶರಣರನ್ನು ಅತ್ಯಾದರದಿಂದ ಬರಮಾಡಿಕೊಂಡ ಸಾಲ ಪಡೆದವರು ಅವರಿಗೆ ಕುಡಿಯಲು ನೀರು ಕೊಟ್ಟರು. ತಿನ್ನಲು ರೊಟ್ಟಿಯನ್ನು ಕೊಟ್ಟರು. ಅದಕ್ಕೆ ಸ್ವಲ್ಪವೂ ಸೊಪ್ಪು ಹಾಕದ ತಮ್ಮಯ್ಯನವರು ತಮಗೆ 20 ರೂ.ಗಳ ಸಾಲ ಮರು ಪಾವತಿ ಬೇಕೆಂದೂ, ಬೇರೆ ಏನೂ ಬೇಡವೆಂದು ಹೇಳಿದರು. ನಿಮ್ಮ ಸಾಲವನ್ನು ಮರಳಿ ಕೊಡುತ್ತೇವೆ. ಬಿಸಿಲಿನಲ್ಲಿ ಬಹಳಷ್ಟು ಬಳಲಿ ಬಂದಿರುವಿರಿ. ಇದನ್ನು ಸ್ವೀಕರಿಸಿ ಎಂದು ಒತ್ತಾಯ ಮಾಡಿದರು. ಭಕ್ತರ ಒತ್ತಾಯಕ್ಕೆ ಮಣಿದ ತಮ್ಮಯ್ಯನವರು ಅವರು ನೀಡಿದ ಪ್ರಸಾದ ಮತ್ತು ನೀರನ್ನು ಸ್ವೀಕರಿಸಿದರು. ಅವರ ಊಟದ ನಂತರ ಮನೆಯಾತ 20 ರೂ. ಕೊಡಲು ಬಂದಾಗ ನಿಮ್ಮ ಸಾಲ ಆಗಲೆ ಮುಟ್ಟಿದೆ. ನೀವು ಇನ್ನೇನೂ ಕೊಡುವುದಿಲ್ಲ ಎಂದು ತಮ್ಮಯ್ಯನವರು ಹಣ ಇಸಿದುಕೊಳ್ಳದೆ ನಡೆದುಬಿಟ್ಟರು.

ಹಣ ಪಡೆದವನಿಗೆ ಸಮಾಧಾನವಾಗಲಿಲ್ಲ. ಹಿಂದೆಯೇ ಜಕ್ಕಲಿಗೆ ಬಂದ ಆತ ಹಣ ಪಡೆದುಕೊಳ್ಳಲು ಶೆಟ್ಟರಿಗೆ ಒತ್ತಾಯ ಮಾಡತೊಡಗಿದ. ಇಲ್ಲ ನಿಮ್ಮ ಸಾಲ ಈಗಾಗಲೇ ನಮಗೆ ಮುಟ್ಟಿದೆ. ನಿಮಗೆ ಕೊಡಲೇಬೇಕೆಂಬ ಆಸೆಯಿದ್ದರೆ ಹೇಗೂ ನಿಮ್ಮೂರಲ್ಲಿ ಕೆರೆ ಇಲ್ಲ. ಈ ಹಣವನ್ನು ಮೂಲ ಬಂಡವಾಳವಾಗಿಸಿಕೊಂಡು ಕೆರೆ ನಿರ್ಮಿಸಿ ಎಂದು ಹೇಳಿದರಂತೆ. ಇಷ್ಟೊಂದು ಕರುಣಾಮಯಿ ಮತ್ತು ಮಾತಿಗೆ ತಪ್ಪದ ಶರಣರಾಗಿದ್ದರು ಅಣ್ಣಯ್ಯ-ತಮ್ಮಯ್ಯನವರು.

ಆಗಿನ ಕಾಲದಲ್ಲಿ ಭೀಕರ ಬರ ಅಂದರೆ, ಡೋಗಿ ಬರ ಬಿದ್ದಾಗ ಸುತ್ತಲಿನ ಗ್ರಾಮಗಳ ಜನತೆಗೆ ತಮ್ಮ ಬಣವಿಯಿಂದ ಸಾಕಷ್ಟು ಮೇವನ್ನು ನೀಡಿ ದನಕರುಗಳಿಗೆ ಜೀವದಾನ ಮಾಡಿದ್ದಲ್ಲದೆ, ಹಸಿವಿನಿಂದ ಬಳಲುತ್ತಿದ್ದವರಿಗೆ ಜಕ್ಕಲಿ ಬಸವಣ್ಣನ ಗುಡಿಯ ಅಂಗದಳದಲ್ಲಿ ಒಲೆಗಳನ್ನು ಹೂಡಿ ಜನತೆಗೆ ಅನ್ನದಾನ ಮಾಡಿದ ಮಹಾಮಹಿಮರು ಅಣ್ಣಯ್ಯ-ತಮ್ಮಯ್ಯನವರು. ಮಕ್ಕಳಿಲ್ಲದೆ ಕೊರಗುತ್ತಿದ್ದ ಅಬ್ಬಿಗೆರೆಯ ಭಕ್ತೆಯೊಬ್ಬಳನ್ನಿಗೆ ಅನುಗ್ರಹಿಸಿ, ಅವಳು ಮಗುವನ್ನು ಪಡೆಯುವಂತೆ ಮಾಡುವಲ್ಲಿ ಶರಣರ ಪವಾಡವಿದೆ. ಅವರ ಪವಾಡಗಳನ್ನು ಓದುತ್ತ ಹೋದಂತೆ ಕೇವಲ 140 ವರ್ಷಗಳ ಹಿಂದೆ ಈ ಭಾಗದಲ್ಲಿದ್ದ ದೊಡ್ಡಮನಿ ಶೆಟ್ಟರು ಮನೆತನದ ಅಣ್ಣಯ್ಯ ತಮ್ಮಯ್ಯನವರು ಮಾಡಿದ ಪುಣ್ಯದ ಕಾರ್ಯಗಳು ಭಕ್ತರ ಮನದಲ್ಲಿ ನಲಿನಲಿದಾಡುತ್ತವೆ. ಜು. 14ರ ರವಿವಾರದಂದು ನಡೆಯುವ ಅಣ್ಣಯ್ಯ-ತಮ್ಮಯ್ಯನವರ 140ನೇ ಪುಣ್ಯತಿಥಿಯನ್ನು ಅವರ ಕುಟುಂಬದವರೆಲ್ಲರೂ ಸೇರಿ ಆಚರಿಸುತ್ತಿದ್ದಾರೆ. ಶರಣರಿಗೆ ನಮ್ಮದೂ ಭಕ್ತಿಪೂರ್ವಕ ಪ್ರಣಾಮಗಳು.

**-ಅರುಣ ಬಿ. ಕುಲಕರ್ಣಿ.**
**ನರೇಗಲ್ಲ-ಕೋಡಿಕೊಪ್ಪ.**

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಜಿಲ್ಲಾ ಆಸ್ಪತ್ರೆಗೆ ಪ್ರತಿದಿನ ಸುಮಾರು 1500 ಜನ ಹೊರ ರೋಗಿಗಳು ನೋಂದಣಿ ಆಗುತ್ತಾರೆ. ಸರಾಸರಿ ತಿಂಗಳಿಗೆ 28 ಸಾವಿರ ರೋಗಿಗಳು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಾರೆ. ಒತ್ತಡದ ಮಧ್ಯೆಯೂ ವೈದ್ಯರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಜಿಲ್ಲಾ ಆಸ್ಪತ್ರೆಗೆ ಔಷಧಿ, ಮೂಲಸೌಕರ್ಯಗಳ ಕೊರತೆ ಆಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ. ಜಿಲ್ಲಾ ಆಸ್ಪತ್ರೆಯ ಅಭಿವೃದ್ಧಿಗಾಗಿ ಅಗತ್ಯ ಸೌಲಭ್ಯಗಳ ಕುರಿತು ಸಚಿವರಿಗೂ ಮತ್ತು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

---

# ರಕ್ತದಾನಕ್ಕೆ ಸಂಘಟನೆಗಳ ಪ್ರೇರಣೆ, ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಜಮಾತೆ ಅಹಲೇ ಸುನ್ನತ್ ಕರ್ನಾಟಕ ಗದಗ ಹಾಗೂ ಎಸ್.ಡಿ.ಪಿ.ಐ. ಸಂಘಟನೆ ಗದಗ ಇವರು ಐ.ಎಂ.ಎ. ಬ್ಲಡ್ ಬ್ಯಾಂಕ್ ಗದಗ ಇವರ ಸಹಯೋಗದಲ್ಲಿ ಈ ಹಿಂದೆ ಹುಬ್ಬಳ್ಳಿ ರಸ್ತೆಯಲ್ಲಿ ರಕ್ತದಾನ ಶಿಬಿರ ಏರ್ಪಡಿಸಿದ್ದರು. ಆ ಸಂದರ್ಭದಲ್ಲಿ ಸುಮಾರು 400ಕ್ಕೂ ಹೆಚ್ಚು ಜನರು ರಕ್ತದಾನವನ್ನು ಮಾಡಿದ್ದರು. ಇದಕ್ಕೆ ಕಾರಣೀಕರ್ತರಾದ ಸಂಘಟನೆಯ ಮುಖ್ಯಸ್ಥರಾದ ಜಿಷಾನ್ ಬೇಗ್ ಹಾಗೂ ಬಿಲಾಲ್ ಗೋಕಾವಿ ಇವರಿಗೆ ಐ.ಎಂ.ಎ. ಬ್ಲಡ್ ಬ್ಯಾಂಕ್ ವತಿಯಿಂದ ಡಾ. ಪ್ಯಾರ್ ಅಲಿ ನೂರಾನಿಯವರು ಸನ್ಮಾನಿಸಿ, ಗೌರವಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಡಾ. ಪ್ಯಾರಾಅಲಿ ನೂರಾನಿ, ಉದಾತ್ತ ಜೀವ ಉಳಿಸುವ ಉದ್ದೇಶಕ್ಕಾಗಿ ದಾನ ಮಾಡಲು 400ಕ್ಕೂ ಹೆಚ್ಚು ಯುವಕರನ್ನು ಪ್ರೇರೇಪಿಸಿದ್ದಾರೆ. ಅವರ ನಿಸ್ವಾರ್ಥ ಪ್ರಯತ್ನಗಳು ಪ್ರಶಂಸನೀಯ. ಅವರಿಗೆ ನೀಡಿದ ಪುರಸ್ಕಾರಗಳು ಮತ್ತು ಅವರ ತಂಡಗಳು ಈ ಜೀವ ಉಳಿಸುವ ಕಾರ್ಯಕ್ಕೆ ಪ್ರೇರಣೆಯಾಗಿವೆ ಎಂದರು.

ಈ ಸಂರ್ಭದಲ್ಲಿ ಐ.ಎಂ.ಎ. ಅಧ್ಯಕ್ಷ ಡಾ. ಜಿ.ಪಲ್ಲೆದ, ಬ್ಲಡ್ ಬ್ಯಾಂಕ್‌ನ ಅಧ್ಯಕ್ಷ ಡಾ. ಪವನ ಪಾಟೀಲ, ಕಾರ್ಯದರ್ಶಿ ಡಾ. ವಿರೇಶ ಹಂಚಿನಾಳ, ಡಾ. ಶ್ರೀಧರ್ ಕುರಡಗಿ, ಕಾರ್ಯದರ್ಶಿ ಡಾ. ಅವಿನಾಶ ಓದುಗೌಡರ್, ಖಜಾಂಚಿ ಡಾ. ಧನ್ನೂರ ಮುಂತಾದವರು ಉಪಸ್ಥಿತರಿದ್ದರು.

---



ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾದ ನೂತನ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಶರಣಬಸಪ್ಪ ಗುಡಿಮನಿ ಇವರಿಗೆ ಗದಗ ಪಂಚಮಸಾಲಿ ಸಮಾಜದ ಅಧ್ಯಕ್ಷ ವೀರಣ್ಣ ಕರಬಿಷ್ಠಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಎಫ್. ವ್ಹಿ ಮರಿಗೌಡ್ರು, ಕೆ.ಕೆ. ಮುಳಗೌಡ್ರು, ಶಿವಾನಂದ ಪಲ್ಲೆದ, ಬಸವರಾಜ ಜಕ್ಕಪ್ಪನವರ, ವೀರಣ್ಣ ಕುರಡಗಿ, ಚಂದ್ರು ಬಾಳಿಹಳ್ಳಿಮಠ, ಬಿ.ಬಿ. ಅಸೂಟಿ, ವಿಜಯಕುಮಾರ ಗಡ್ಡಿ, ಸಿದ್ಧಣ್ಣ ಬಂಡಿ, ಮಲ್ಲಾಪೂರ, ಶರಣಪ್ಪ ಕುರಡಗಿ ಹಾಗೂ ಪಂಚಮಸಾಲಿ ಮುಖಂಡರು ಉಪಸ್ಥಿತರಿದ್ದರು.

---

# ಮಳೆಗಾಗಿ ರೈತರಿಂದ ವಿಶೇಷ ಪೂಜೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸೊಪ್ಪಿನಕೇರಿ ಓಣಿಯ ರೈತ ಸಮುದಾಯ ಈ ವರ್ಷವೂ ಮಳೆಗಾಗಿ ಪ್ರಾರ್ಥಿಸಿ ಶ್ರೀ ಕೊಲ್ಲಾರೆಮ್ಮ ದೇವಿಗೆ ವಿಶೇಷ ಪೂಜೆ, ಎತ್ತಿನ ಮೆರವಣಿಗೆ, ಮಹಿಳೆಯರ ಪೂರ್ಣಕುಂಭ, ಪ್ರಸಾದ ಸೇವೆ ಮಾಡುವ ಮೂಲಕ ಮಳೆಗಾಗಿ ಪರವು ಸಂಪ್ರದಾಯ ಆಚರಿಸಿದರು.



ಈ ವಿಶೇಷ ಪರವು ಸಂಪ್ರದಾಯ ಆಚರಣೆಗಾಗಿ ಓಣಿಯ ಹಿರಿಯರು, ಯುವಕರು ಜಂತ್ಲಿ ಬಸವೇಶ್ವರ ದೇವಸ್ಥಾನದ ಪ್ರಾಂಗಣದಲ್ಲಿ ರಾತ್ರೋರಾತ್ರಿ ಗೋದಿ ಹುಗ್ಗಿ, ಜೋಳದ ಕಿಚಡಿ, ಅನ್ನ-ಸಾರು ಪ್ರಸಾದ ಸಿದ್ಧಪಡಿಸುತ್ತಾರೆ. ಬೆಳಿಗ್ಗೆ ಅಂಲಕೃತ ಎತ್ತಿನ ಬಂಡಿ, ಟ್ರ್ಯಾಕ್ಟರ್‌ಗಳಲ್ಲಿ ಸಿದ್ಧಪಡಿಸಿ ಪ್ರಸಾದವನ್ನಿರಿಸಿ ಡೊಳ್ಳು, ಭಜನೆ, ಮಹಿಳೆಯರ ಪೂರ್ಣಕುಂಭ, ಎತ್ತುಗಳ ಮೆರವಣಿಗೆ ಮೂಲಕ ಭಜನೆ ಅಡರಕಟ್ಟಿ ಹತ್ತಿರದ ಕೊಲ್ಲಾರೆಮ್ಮನ ಪೌಳಿಗೆ ತೆರಳಿ ಅಲ್ಲಿ ದೇವಿಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ.

ಈ ಸಂದರ್ಭದಲ್ಲಿ ದೇವಿ ಮಳೆಯ ಭವಿಷ್ಯ ಉದ್ಘರಿಸುತ್ತಾಳೆ. ನಂತರ ಲಕ್ಷ್ಮೇಶ್ವರ, ಮಂಜಲಾಪುರ, ಅಡರಕಟ್ಟಿ ಸುತ್ತಮುತ್ತಲಿನ ಭಾಗದ ರೈತ ಕುಟುಂಬಗಳಷ್ಟೇ ಅಲ್ಲದೆ ಈ ಮಾರ್ಗದಲ್ಲಿ ಸಂಚರಿಸುವ ಸಾವಿರಾರು ಜನರನ್ನು ಕರೆದು ಪ್ರಸಾದ ಉಣಬಡಿಸಿದರು. ಸಂಜೆ ಸೂರಣಗಿಯ ಡೊಳ್ಳು ಮೇಳದೊಂದಿಗೆ ಪಟಾಕಿ ಸಿಡಿಸಿ ಪಟ್ಟಣದ ಪ್ರಮುಖ ಮಾರ್ಗದಲ್ಲಿ ವಿಜೃಂಭಣೆಯಿಂದ ಎತ್ತುಗಳ ಮೆರವಣಿಗೆ ಜರುಗಿತು. ಓಣಿಯ ಹಿರಿಯರು, ಮಹಿಳೆಯರು ಸೇರಿ ರೈತ ಸಮುದಾಯದವರು ಪಾಲ್ಗೊಂಡಿದ್ದರು.

---



ಗದಗ ನಗರದ ಸುಪ್ರಸಿದ್ಧ ವೀರನಾರಾಯಣ ದೇವಸ್ಥಾನಕ್ಕೆ ಬಂದಿದ್ದ ಭಕ್ತರೊಬ್ಬರು ತಮ್ಮ ಬ್ಯಾಗ್ ಸೇರಿದಂತೆ ಮೊಬೈಲ್ ಕಳೆದುಕೊಂಡಿದ್ದರು. ಕರ್ತವ್ಯದಲ್ಲಿದ್ದ ಹೋಮಗಾರ್ಡ್‌ಗಳಾದ ಸರಿತಾ ಬುಟ್ಟಿ ಕೊರವರ, ಭಾರತಿ ಕಬಾಡಿ ಇವರಿಗೆ ಬ್ಯಾಗ್ ಸಿಕ್ಕಿದ್ದು, ಸುರಕ್ಷಿತವಾಗಿ ವಾರಸುದಾರರಿಗೆ ಮುಟ್ಟಿಸಿ ತಮ್ಮ ಪ್ರಾಮಾಣಿಕತೆ ಮೆರೆದಿದ್ದಾರೆ.

---

**ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವರ ಜನ್ಮ ದಿನಾಚರಣೆ ಕಾರ್ಯಕ್ರಮ**

# ಕನ್ನಡಕ್ಕಾಗಿ ಜೀವನವನ್ನೇ ಮುಡಿಪಾಗಿಟ್ಟವರು

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮುಂಬಯಿ ಪ್ರಾಂತ್ಯದಲ್ಲಿದ್ದ ಕನ್ನಡ ಪ್ರದೇಶಗಳಲ್ಲಿ ಮರಾಠಿ ಭಾಷೆಯ ಪ್ರಾಬಲ್ಯ ಹೆಚ್ಚಾದ ಸಂದರ್ಭದಲ್ಲಿ ವೆಂಕಟರಾವ ಅವರು 1906ರಲ್ಲಿ 'ವಾಗ್ಭೂಷಣ' ಎಂಬ ಪತ್ರಿಕೆ ಆರಂಭಿಸಿದರು. ತಮ್ಮ ವಕೀಲ ವೃತ್ತಿಯನ್ನು ತೊರೆದು ಸ್ವದೇಶಿ ಚಳುವಳಿಯಲ್ಲಿ ಭಾಗವಹಿಸಿದರು. ಈ ಮೂಲಕ ಕರ್ನಾಟಕ ಏಕೀಕರಣದ ಚಳುವಳಿಯಲ್ಲಿ ಕನ್ನಡ ಭಾಷೆ, ಸಾಹಿತ್ಯಕ್ಕಾಗಿ ಆಲೂರು



ವೆಂಕಟರಾಯರು ತಮ್ಮ ಜೀವನವನ್ನು ಮುಡುಪಾಗಿಟ್ಟಿದ್ದರು ಎಂದು ಶಾಲಾ ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕ ಈಶ್ವರ ನಾಯಕ ಹೇಳಿದರು.

ಶುಕ್ರವಾರಬೆಳಿಗ್ಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದ್ದ ಸುವರ್ಣ ಕರ್ನಾಟಕ 50ರ ಸಂಭ್ರಮಾಚರಣೆ ಮತ್ತು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಅವರ 144ನೇ ಜನ್ಮ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತಾಡಿದರು.

ವೆಂಕಟರಾವ ಕನ್ನಡಿಗರ ನಿರಭಿಮಾನದ ಬಗ್ಗೆ ಮರುಕಪಡುತ್ತಿದ್ದರು. ಉದ್ಯಮಶೀಲತೆ ಬೆಳೆಸುವ ಮೂಲಕ ಸ್ವಾವಲಂಬಿ ಬದುಕನ್ನು ಕನ್ನಡಿಗರು ಕಟ್ಟಿಕೊಳ್ಳಬೇಕು ಎಂಬ ವಿಚಾರವಾಗಿ ಪ್ರಾರಂಭದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿದರು. ಆದರೆ ಬ್ರಿಟಿಷರ ಅಸಹಕಾರದಿಂದ ಯಶಸ್ಸು ಕಾಣಲಿಲ್ಲ. ರೈತರ ಅಭಿವೃದ್ಧಿಗಾಗಿ ರೈತ ಸಂಘಗಳನ್ನು ಸ್ಥಾಪಿಸಿದರು ಎಂದು ತಿಳಿಸಿದರು.ಕವಿವಿ ವಿಶ್ರಾಂತ ಕುಲಪತಿ ಡಾ. ಪ್ರಮೋದ ಗಾಯಿ ಮಾತನಾಡಿ, ಕರ್ನಾಟಕ ಎಂಬ ಪದವನ್ನು ತಂದುಕೊಟ್ಟವರು ಆಲೂರ ವೆಂಕಟರಾವರು. ಇವರು ಬರೆದ ಪುಸ್ತಕ, ಸಾಹಿತ್ಯಗಳನ್ನು ಓದಿದರೆ ಇವರ ಸಂಪೂರ್ಣ ಜೀವನ ಚರಿತ್ರೆಯನ್ನು ತಿಳಿಯಬಹುದು ಎಂದು ಹೇಳಿದರು.

ಆಲೂರು ವೆಂಕಟರಾವ ಅವರು ಪತ್ರಿಕಾ ರಂಗಕ್ಕೆ ನೀಡಿದ ಕೊಡುಗೆ ಮತ್ತು ಪತ್ರಿಕಾ ರಂಗದಲ್ಲಿ ಭಾಷೆಯ ಬಳಕೆಯ ಕುರಿತು ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ನಿವೃತ್ತ ಸಂಪಾದಕ ಮನೋಜಗೌಡ ಪಾಟೀಲ ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ದೀಪಕ ಆಲೂರು, ವೆಂಕಟೇಶ ದೇಸಾಯಿ, ಪಾರ್ವತಿ ಹಾಲಭಾವಿ ದಂಪತಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

---


**ಡಿ.ಕೆ. ಶಿವಕುಮಾರರನ್ನು ಬಿಜೆಪಿ ಮತ್ತೊಮ್ಮೆ ಮುಟ್ಟಿದರೆ ಪಕ್ಷ ನಿರ್ಮೂಲನೆ: ಮಹಮ್ಮದ್ ನಲಪಾಡ್**

# ಬಿಜೆಪಿಯವರು ಹರಿಶ್ಚಂದ್ರನ ವಂಶದವರಲ್ಲ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಒಂದು ಸಾರಿ ಡಿ.ಕೆ. ಶಿವಕುಮಾರ್ ಮುಟ್ಟಿದ್ದಕ್ಕೆ ಬಿಜೆಪಿಯವರು 66 ಸ್ಥಾನಕ್ಕೆ ಹೋಗಿದ್ದಾರೆ. ಇನ್ನೊಂದು ಸಾರಿ ಮುಟ್ಟಿದರೆ ಸಂಪೂರ್ಣ ನಿರ್ಮೂಲನೆಯಾಗುತ್ತಾರೆ ಎಂದು ಕೆಪಿಸಿಸಿ ಯುವ ಘಟಕದ ಅಧ್ಯಕ್ಷ ಮಹಮ್ಮದ್ ಹ್ಯಾರಿಸ್ ನಲಪಾಡ್ ಹೇಳಿದರು.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ವಿಚಾರವಾಗಿ ಮಾತನಾಡಿದ ಅವರು, ಸರ್ಕಾರ ನಡೆಸಲು ಅಧಿಕಾರಿಗಳ ಪಾತ್ರ ಮುಖ್ಯವಾಗಿದೆ. ಅಧಿಕಾರಿಗಳನ್ನು ನಿಯಂತ್ರಿಸುವುದು ಸಚಿವರ ಕೆಲಸ. ಬಿಜೆಪಿಯವರು ಹಗರಣ ಮಾಡಿದಾಗ ಇ.ಡಿ ಎಲ್ಲಿತ್ತು? ಅವರೆಲ್ಲ ಹರಿಶ್ಚಂದ್ರನ ವಂಶದವರೇನಲ್ಲ. ಯಡಿಯೂರಪ್ಪ ಜೈಲಿಗೆ ಹೋಗಿದ್ದು ಎಲ್ಲರಿಗೂ ನೆನಪಿದೆ ಎಂದರು.



ಕೋವಿಡ್ ಸಮಯದಲ್ಲಿ ಆರೋಗ್ಯ ಸಚಿವರಾಗಿದ್ದ ಸುಧಾಕರ್ ದುಡ್ಡು ದೋಚಿದರು. ಡಿ.ಕೆ. ಶಿವಕುಮಾರ್ ಪ್ರಕರಣ, ಯಡಿಯೂರಪ್ಪ ಪ್ರಕರಣ ಬೇರೆ ಬೇರೆಯೇ. ಬಿಜೆಪಿಯವರು ಡಿ.ಕೆ. ಶಿವಕುಮಾರ್ ಅವರನ್ನು ಗುರಿ ಮಾಡಿದ್ದಾರೆ ಎಂದು ಆರೋಪಿಸಿದರು.

ಬಿಜೆಪಿಯವರಿಗೆ ಸಾಧ್ಯವಾದರೆ ನ್ಯಾಯುತವಾಗಿ ಹೋರಾಟ ಮಾಡಲಿ. ಮುಡಾ ಹಗರಣ ಆಗಿರುವುದು ಬಿಜೆಪಿ ಕಾಲದಲ್ಲಿ. ಸಿದ್ದರಾಮಯ್ಯ ಕುರುಬ ಸಮುದಾಯದವರು. ಅವರು ಎರಡನೇ ಬಾರಿ ಸಿಎಂ ಆಗಿರುವುದು ಬಿಜೆಪಿಗೆ ಸಹಿಸಲಾಗುತ್ತಿಲ್ಲ. ಜನ ನಮ್ಮ ಪರ ಇದ್ದಾರೆ ಎಂದರು.

ನಗರದಲ್ಲಿ ಕಾಂಗ್ರೆಸ್‌ನಿಂದ ಯುವ ವಿಕಾಸ ಶಿಬಿರ ಹಮ್ಮಿಕೊಳ್ಳಲಾಗಿದೆ. ಯುವ ಘಟಕದ ರಾಜ್ಯಾಧ್ಯಕ್ಷನಾಗಿ ಅಥವಾ ಪಕ್ಷದಲ್ಲಿ ಇರುತ್ತೇನೋ ಇಲ್ಲವೋ, ಆದರೆ, ನಾನು ಸಂವಿಧಾನದ ಪರವಾಗಿ ಇರುತ್ತೇನೆ. ನಮ್ಮ ನಾಯಕ ರಾಹುಲ್ ಗಾಂಧಿ ಅವರ ಆಶಯದಂತೆ ನಾವು ವೈಟ್ ಟೀ ಶರ್ಟ್ ಆರ್ಮಿ ಆಚರಣೆ ಮಾಡುತ್ತಿದ್ದೇವೆ ಎಂದರು.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ಹಡಪದ ಅಪ್ಪಣ್ಣನವರು ನಿಜಸುಖಿಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಯಕ, ದಾಸೋಹ, ಸಮಾನತೆ ಬಸವಾದಿ ಶಿವಶರಣರ ಸಿದ್ಧಾಂತಗಳು. ಶರಣ ಹಡಪದ ಅಪ್ಪಣ್ಣನವರು ಲಿಂಗಾನುಭಾವಿಗಳಾಗಿದ್ದರು. ಲಿಂಗಾಂಗ ಸಾಮರಸ್ಯದಲ್ಲಿ ಸಿಗುವ ಸುಖವನ್ನು ನಿತ್ಯವೂ ಅನುಭವಿಸಿ ನಿಜಸುಖಿಗಳಾಗಿದ್ದರು ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2701ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಹಡಪದ ಅಪ್ಪಣ್ಣನವರು ಬಸವಣ್ಣನವರ ಪ್ರೀತಿಗೆ ಪಾತ್ರರಾಗಿದ್ದರು.

ಅಪ್ಪಣ್ಣನವರು ಅನುಭಾವಿಗಳು, ತತ್ತ್ವವನ್ನು ಅರಿತವರು, ಶಿಸ್ತು, ಸೌಜನ್ಯ, ನಯ-ವಿನಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡವರು. ಹಡಪದ ಅಪ್ಪಣ್ಣನವರು ಪ್ರಾರಂಭದಿಂದಲೂ ಮಹಾಮಾನವತಾವಾದಿ ಬಸವಣ್ಣನವರ ಬದುಕಿನ ರಕ್ಷಕರಾಗಿ, ಆಪ್ತ ಕಾರ್ಯದರ್ಶಿಯಾಗಿ, ಆಪ್ತ ಸಹಾಯಕರಾಗಿ, ಮಹಾಮನೆಯ ಮೇಲ್ವಿಚಾರಕರಾಗಿ ಕಾಯಕ ನಿರ್ವಹಿಸಿದ್ದಾರೆ. ಸಾವಿರಾರು ವಚನಗಳನ್ನು ಬರೆದಿದ್ದರೂ ಕೂಡಾ ಹಡಪದ ಅಪ್ಪಣ್ಣನವರ 250 ವಚನಗಳು, ಹಡಪದ ಲಿಂಗಮ್ಮನವರ 114 ವಚನಗಳು ಲಭ್ಯವಿವೆ.



ಫ.ಗು. ಹಳಕಟ್ಟಿಯವರು ಸಂಗ್ರಹಿಸಿ, ಸಂಶೋಧಿಸಿ ಪ್ರಕಟಿಸಿದ ವಚನಸಾಹಿತ್ಯವನ್ನು ನಾಡಿನಾದ್ಯಂತ ಪ್ರವಚನದ ಮೂಲಕ ಪ್ರಚಾರ ಮಾಡಿದ ಶ್ರೇಯಸ್ಸು ಲಿಂ. ಪೂಜ್ಯ ಲಿಂಗಾನಂದ ಮಹಾಸ್ವಾಮಿಗಳಿಗೆ ಸಲ್ಲುತ್ತದೆ. ಬಸವಾದಿ ಶಿವಶರಣರ ತತ್ತ್ವಗಳನ್ನು, ಆದರ್ಶಗಳನ್ನು, ಮೌಲ್ಯಗಳನ್ನು ಜೀವನದಲ್ಲಿ ರೂಢಿಸಿಕೊಳ್ಳಬೇಕು ಎಂದು ಶ್ರೀಗಳು ನುಡಿದರು.

ಅತಿಥಿಗಳಾಗಿ ರಾಜ್ಯ ಹಡಪದ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ವಿ.ಬಿ. ಕೊಣ್ಣೂರು, ಗದಗ-ಬೆಟಗೇರಿ ಹಡಪದ ಅಪ್ಪಣ್ಣ ಸಂಘದ ಅಧ್ಯಕ್ಷ ಟಿ.ವಾಯ್. ಹಡಪದ, ಶ್ರೀನಿವಾಸ ಬಿ.ಹಡಪದ ಭಾಗವಹಿಸಿದ್ದರು.


ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ವಚನಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಜಯಶ್ರೀ ಆರ್. ಮುದೇನಗುಡಿ, ವಚನ ಚಿಂತನೆಯನ್ನು ಸೃಷ್ಟಿ ಎನ್.ಹಿರೇಮಠ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಿಕೊಂಡಿದ್ದ ಮಂಜುನಾಥ ಹೂವಪ್ಪ ಗಜಾಕೋಶ, ಬಸವರಾಜ ಹಡಪದ, ಬಸವರಾಜ ತೋಟಪ್ಪ ಹಡಪದ ಅವರನ್ನು ಪೂಜ್ಯರು ಸಂಮಾನಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್‌ರಾದ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

ನಿಜಸುಖಿ ಶರಣ ಹಡಪದ ಅಪ್ಪಣ್ಣ ಕುರಿತು ಶ್ರೀ ಗುರುಬಸವ ಮಂಟಪ ಟ್ರಸ್ಟ್ ಹುಬ್ಬಳ್ಳಿಯ ಸಂಚಾಲಕ ಶಶಿಧರ ಕರವೀರಶೆಟ್ರ ಉಪನ್ಯಾಸ ನೀಡಿ, ಹಡಪದ ಅಪ್ಪಣ್ಣನವರಿಗೆ ಲಿಂಗತತ್ತ್ವ ಬದುಕಿನ ಜೀವಾಳವಾಗಿತ್ತು. ಇಡೀ ಬದುಕು ಲಿಂಗಮಯವಾಗಿತ್ತು. ಲಿಂಗತತ್ವದಲ್ಲಿ ನಿಜವಾದ ಸುಖವನ್ನು ಕಂಡಂತಹ ಅಪ್ಪಣ್ಣನವರು ನಿಜಸುಖಿಗಳಾಗಿದ್ದರು. ಅಪ್ಪಣ್ಣನವರ ಪುಣ್ಯಸ್ತ್ರೀ ಹಡಪದ ಲಿಂಗಮ್ಮನವರು ಸಹಿತ ಅಪ್ರತಿಮ ಶರಣೆಯಾಗಿದ್ದರು. ಹಡಪದ ಅಪ್ಪಣ್ಣನವರ ಜೀವನಾದರ್ಶಗಳನ್ನು ಅರಿತು ಬದುಕಿನಲ್ಲಿ ಅಳವಡಿಸಿಕೊಳ್ಳಲು ಪ್ರಯತ್ನಿಸಬೇಕು ಎಂದು ಮಾತನಾಡಿದರು.

## ಎಸ್.ಡಿ.ಎಂ.ಸಿ ಅಧ್ಯಕ್ಷರ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ



ಇಲ್ಲಿಯ ಬಾಲಕಿಯರ ಸರಕಾರಿ ಪ್ರೌಢಶಾಲೆಯ ಎಸ್.ಡಿ.ಎಂ.ಸಿ ನೂತನ ಅಧ್ಯಕ್ಷರಾಗಿ ಮಹಾಂತೇಶ ಕುಂಬಾರ ಆಯ್ಕೆಯಾಗಿದ್ದಾರೆ.

ಶುಕ್ರವಾರ ನಡೆದ ಪಾಲಕರ ಸಭೆಯಲ್ಲಿ ಮುಂದಿನ 6 ತಿಂಗಳ ಅವಧಿಗೆ ಮಹಾಂತೇಶ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ನೂತನ ಸದಸ್ಯರಾಗಿ ಹನುಮವ್ವ ಸೋಮನಕಟ್ಟಿ, ಮಹಾದೇವಪ್ಪ ಈಟಿ, ಮಾಬೂಬಿ ಗುದಗನವರ, ಲಲಿತಾ ಮುಸ್ಕಿನಭಾವಿ, ಪಾರ್ವತಿ ಮಾಡಲಗೇರಿ ಆಯ್ಕೆಯಾದರು. ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸದಸ್ಯರಾದ ಕುಬೇರಪ್ಪ ಬೆಂತೂರು, ಅನಸವ್ವ ಅಂಬಕ್ಕಿ, ವಿರುಪಾಕ್ಷಪ್ಪ ಬೆಟಗೇರಿ, ಮಹಾಂತೇಶ ಕಮತರ, ಮುಖ್ಯೋಪಾಧ್ಯಾಯ ವೈ.ಎಚ್. ತೆಕ್ಕಲಕೋಟಿ ಉಪಸ್ಥಿತರಿದ್ದರು.

### ಅಮೃತ್ 2.0 ಯೋಜನೆಯ ಕೊಳವೆ ಮಾರ್ಗ ಅಳವಡಿಕೆಗೆ ಸಂಸದ ಬೊಮ್ಮಾಯಿ ಭೂಮಿಪೂಜೆ

## ನಿಗದಿತ ಸಮಯದಲ್ಲಿ ಕಾಮಗಾರಿ ಪೂರ್ಣಗೊಳಿಸಿ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ವ್ಯಾಪ್ತಿಯ ಮನೆಗಳಿಗೆ ನಲ್ಲಿಗಳ ಮೂಲಕ ಕುಡಿಯುವ ನೀರು ಪೂರೈಸುವ ಅಮೃತ 2.0 ಯೋಜನೆಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಿ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಪಟ್ಟಣದ 1ನೇ ವಾರ್ಡಿನ ರಾಜವಾಡೆ ಮುಂಭಾಗದಲ್ಲಿ ಅಂದಾಜು ರೂ.3242 ಲಕ್ಷ ವೆಚ್ಚದ ಅಮೃತ್-2.0ರ ಯೋಜನೆ ಅಡಿಯಲ್ಲಿ ಕುಡಿಯುವ ನೀರಿನ ವಿತರಣಾ ಕೊಳವೆ ಮಾರ್ಗ ಅಳವಡಿಸುವ ಕಾಮಗಾರಿಗೆ ಶನಿವಾರ ಶಂಕುಸ್ಥಾಪನೆ ನೇರವೇರಿಸಿ ಅವರು ಮಾತನಾಡಿದರು.

ಅಮೃತ್ 2.0 ಯೋಜನೆ 9230 ಕೋಟಿ ರೂಪಾಯಿ ವೆಚ್ಚದ್ದಾಗಿದ್ದು, ಇದರಲ್ಲಿ ಕೇಂದ್ರ ಸರ್ಕಾರ 4615 ಕೋಟಿ ಹಾಗೂ ರಾಜ್ಯ ಸರ್ಕಾರವು 3692 ಕೋಟಿ ಸಹಯೋಗ ನೀಡಲಿದೆ. ಉಳಿದ 927 ಕೋಟಿ ರೂ ಹಣವನ್ನು ಸ್ಥಳೀಯ ಸಂಸ್ಥೆಗಳು ಭರಿಸುತ್ತವೆ. ರಾಜ್ಯದಲ್ಲಿ ಲಕ್ಷಕಿಂತ ಕಡಿಮೆ ಇರುವ 287 ಸ್ಥಳೀಯ ಸಂಸ್ಥೆಗಳ ಪೈಕಿ 248 ಸಂಸ್ಥೆಗಳ ವ್ಯಾಪ್ತಿಯ ಮನೆಗಳಿಗೆ ನೀರು ಪೂರೈಸಲಾಗುವುದು ಎಂದ ಅವರು, ಹಾವೇರಿ-ಗದಗ ಲೋಕಸಭಾ ಮತಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಕ್ಷೇತ್ರದಲ್ಲಿ ಅವಶ್ಯಕವಾಗಿ ಆಗಬೇಕಿರುವ ಅಭಿವೃದ್ಧಿ ಕಾರ್ಯಗಳ ಅನುಷ್ಠಾನಕ್ಕೆ ಸಂಬಂಧಿಸಿದ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಪರಿಹಾರ ಹಾಗೂ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದರು.

ಪುರಸಭೆ ಸದಸ್ಯ ರಾಜು ಸಾಂಗ್ಲೀಕರ ಅವರು ಪಟ್ಟಣಕ್ಕೆ ರೈಲ್ವೆ ಹಾಗೂ ರಾಷ್ಟ್ರೀಯ ಹೆದ್ದಾರಿಯ ಸೌಲಭ್ಯವನ್ನು ದೊರಕಿಸಲು ಸಂಸದ ಬಸವರಾಜ ಬೊಮ್ಮಾಯಿ ಅವರು ಮುಂದಾಗಬೇಕು ಎಂದು ಮನವಿ ನೀಡಿದರು.

ಪುರಸಭೆ ವಿಪಕ್ಷ ನಾಯಕ ಮುರ್ತುಜಾ ಡಾಲಾಯತ್, ಸದಸ್ಯರಾದ ಸುಭಾಸ ಮ್ಯಾಗೇರಿ, ಶಿವರಾಜ ಘೋರ್ಪಡೆ, ಮುದಿಯಪ್ಪ ಮುದೋಳ, ಯಮನೂರ ತಿರಕೋಜಿ, ರೂಪ್ಲೇಶ ರಾಠೋಡ ಹಾಗೂ ಸಿದ್ದಪ್ಪ ಬಂಡಿ, ಎಚ್.ಎಸ್. ಸೋಂಪುರ, ಬಿ.ಎಂ. ಸಜ್ಜನರ, ದುರಗಪ್ಪ ಮುಧೋಳ, ಬಿ.ಎಸ್. ಶೀಲವಂತರ, ಉಮೇಶ ರಾಠೋಡ ಸೇರಿ ಇತರರು ಇದ್ದರು.

ಶಾಸಕ ಜಿ.ಎಸ್.ಪಾಟೀಲ ಮಾತನಾಡಿ, ಮತಕ್ಷೇತ್ರದಲ್ಲಿ ರಸ್ತೆ, ನೀರು ಸೇರಿ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಲು ಸರ್ಕಾರವು ಕಾರ್ಯ ನಿರ್ವಹಿಸುತ್ತಿರುವ ಪರಿಣಾಮ ಕ್ಷೇತ್ರದ ಜನತೆಗೆ ಅಮೃತ್ 2.0 ಯೋಜನೆ ಅಡಿಯಲ್ಲಿ ಗಜೇಂದ್ರಗಡ ಪಟ್ಟಣದ ವ್ಯಾಪ್ತಿಯ ಮನೆಗಳಿಗೆ ನೀರು ಪೂರೈಸಲು ಚಾಲನೆ ನೀಡಲಾಗಿದೆ. ಅಧಿಕಾರಿಗಳು ಯೋಜನೆ ಲಾಭವನ್ನು ಜನತೆಗೆ ಸಕಾಲದಲ್ಲಿ ತಲುಪಿಸಲು ಮುಂದಾಗಬೇಕು ಎಂದರು.

## ಡೆಂಘೀ ಜ್ವರದ ಕುರಿತು ಭಯ, ಆತಂಕ ಬೇಡ

▶▶ ಮೊದಲನೇ ಪುಟದಿಂದ

ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಸೊಳ್ಳೆಗಳ ಉತ್ಪತ್ತಿಯನ್ನು ಸಂಪೂರ್ಣ ನಿಯಂತ್ರಿಸಬೇಕು. ಸೊಳ್ಳೆಗಳ ಸಂಭಾವ್ಯ ಸಂತಾನೋತ್ಪತ್ತಿ ಸ್ಥಳಗಳನ್ನು ನಾಶಪಡಿಸಲು ಎಲ್ಲರೂ ಮೂಂದಾಗಬೇಕು. ನಿಂತ ನೀರು ಸೊಳ್ಳೆಗಳ ಉತ್ಪತ್ತಿಗೆ ಕಾರಣ. ನಿಂತಿರುವ ನೀರಿನ ಎಲ್ಲ ಮೂಲಗಳನ್ನು ತೆರವುಗೊಳಿಸಿ, ಸೊಳ್ಳೆ ನಿವಾರಕಗಳನ್ನು ಬಳಸಿ ಸಾರ್ವಜನಿಕರು ಡೆಂಘೀ ನಿಯಂತ್ರಿಸಬೇಕು ಎಂದರು.ಚರಂಡಿ ನಾಲೆಗಳಲ್ಲಿ ಕಸಕಡ್ಡಿಗಳನ್ನು ಎಸೆಯದೇ ನೀರು ಸರಾಗವಾಗಿ ಸಾಗುವಂತೆ ನೋಡಿಕೊಳ್ಳಬೇಕು. ಮನೆಯಲ್ಲಿರುವ ನೀರು ಸಂಗ್ರಹಣಾ ಪಾತ್ರೆಗಳು ಮತ್ತು ಡ್ರಮ್‌ಗಳನ್ನು ಸರಿಯಾದ ಮುಚ್ಚಳದಿಂದ ಮುಚ್ಚಿ ಹಾಗೂ ದೊಡ್ಡ ತೊಟ್ಟಿಗಳನ್ನು ವಾರಕ್ಕೊಮ್ಮೆ ಸಂಪೂರ್ಣವಾಗಿ ಖಾಲಿ ಮಾಡಿ, ಸರಿಯಾಗಿ ಮುಚ್ಚಿ ಎಂದು ನಿರ್ದೇಶಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ತೀವ್ರ ಜ್ವರ, ತಲೆ ನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ನೋವು ಉಂಟಾಗುವುದು ಡೆಂಘೀ ಜ್ವರದ ಲಕ್ಷಣಗಳಾಗಿವೆ. ಜ್ವರದ ಲಕ್ಷಣಗಳೊಂದಿಗೆ ಬಾಯಿ, ಮೂಗು ಮತ್ತು ಒಸಡುಗಳಿಂದ ರಕ್ತಸ್ರಾವದ, ಚರ್ಮದ ಮೇಲೆ ರಕ್ತಸ್ರಾವದ ಗುರುತುಗಳು, ಕಪ್ಪು ಮಲ ವಿಸರ್ಜನೆ, ವಿಪರೀತ ಬಾಯಾರಿಕೆ ಅಥವಾ ಜ್ಞಾನ ತಪ್ಪುವುದು ಇವುಗಳು ಡೆಂಘೀ ಶಾಕ್ ಸಿಂಡ್ರೋಮ್‌ನ ಲಕ್ಷಣಗಳಾಗಿವೆ. ಮಲಗುವಾಗ ಸೊಳ್ಳೆ ಪರದೆಯನ್ನು ಉಪಯೋಗಿಸಬೇಕು. ನೀರಿನ ಬಾವಿ, ಕಾರಂಜಿಗಳು, ಕಟ್ಟಡ ನಿರ್ಮಾಣಕ್ಕಾಗಿ ಸಂಗ್ರಹಿಸಿದ ನೀರು ಶೇಖರಣೆ, ಕೆರೆ, ಹೊಂಡ, ಗದ್ದೆ ಜೌಗು ಪ್ರದೇಶದಲ್ಲಿ ಸೊಳ್ಳೆ ಮರಿಗಳನ್ನು ತಿನ್ನುವ ಗ್ಯಾಂಬೂಸಿಯಾ ಮತ್ತು ಗಪ್ಪಿ ಲಾರ್ವಾಹಾರಿ ಮೀನುಗಳನ್ನು ಬಿಟ್ಟು ಸೊಳ್ಳೆಗಳ ಉತ್ಪತ್ತಿಯನ್ನು ನಿಯಂತ್ರಿಸಬೇಕು ಎಂದರು.

ಸಭೆಯಲ್ಲಿ ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರೆಗೌಡ್ರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ನಗರಸಭೆ ಪೌರಾಯುಕ್ತ ಪ್ರಶಾಂತ ವರಗಪ್ಪನವರ ಸೇರಿದಂತೆ ಆರೋಗ್ಯ ಇಲಾಖೆಯ ಕಾರ್ಯಕ್ರಮಾಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಹಾಜರಿದ್ದರು.

## ಭಗ್ನ ಮೂರ್ತಿಗಳನ್ನು ದುರಸ್ತಿಗೊಳಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಭೀಷ್ಮಕೆರೆ ಮುಖ್ಯ ಪ್ರವೇಶದ್ವಾರದಲ್ಲಿ ಭಗ್ನಗೊಂಡ ಮೂರ್ತಿಗಳನ್ನು ದುರಸ್ತಿಗೊಳಿಸಲು ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳಿಗೆ ಕ್ರಾಂತಿಸೇನಾ ಗದಗ ಜಿಲ್ಲಾ ಸಂಘಟನೆ ವತಿಯಿಂದ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಕ್ರಾಂತಿಸೇನಾ ಗದಗ ಜಿಲ್ಲಾ ಗೌರವ ಕಾರ್ಯದರ್ಶಿ ಪ್ರವೀಣ ಹಬೀಬ ಮಾತನಾಡಿ, ಭೀಷ್ಮಕೆರೆಯ ಮುಖ್ಯ ಪ್ರವೇಶ ದ್ವಾರದಲ್ಲಿರುವ ಶ್ರೀ ಕೃಷ್ಣ ಪರಮಾತ್ಮನ ಪ್ರತಿಮೆಯ ರಥದ ಒಂದು ಕುದುರೆ ಮುಕ್ಕಾಗಿದೆ. ಅದನ್ನು ಮರು ನಿರ್ಮಿಸಬೇಕು. ಅಲ್ಲಿ ಅಚಿಟಿಸಿರುವ ಪ್ರಚಾರದ ಪೋಸ್ಟರ್‌ಗಳನ್ನು ತೆರುವುಗೊಳಿಸಬೇಕು ಎಂದು ಹೇಳಿದರು.

ರಾಣಿ ಚಂದಾವರಿ ಮಾತನಾಡಿ, ಭೀಷ್ಮಕೆರೆಯ ಉದ್ಯಾನವನ ಸ್ವಚ್ಛತೆ ಇಲ್ಲದೆ ಗಲೀಜು ವಾತಾವರಣ ಸೃಷ್ಟಿಯಾಗಿದೆ. ಅದನ್ನು ಸ್ವಚ್ಛಗೊಳಿಸಿ, ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದರು.

ಈ ಸಂದರ್ಭದಲ್ಲಿ ಪದಾಧಿಕಾರಿಗಳಾದ ವಿನಾಯಕ್ ಕಾಟವಾ, ರೇಣುಕಾ ಕಬಾಡಿ, ಅಕ್ಷತಾ ಪವಾರ, ರೇಣುಕಾ ಕಲ್ಬುರ್ಗಿ, ನಾರಾಯಣಸಾ ಕಬಾಡಿ, ನಾಗರಾಜ್ ಪವಾರ್, ರಾಮಣ್ಣ ನವಲಗುಂದ, ಸುನೀಲ ದರ್ಶನ್, ರಾಮಕಲ್ಲಪ್ಪ, ನಾಗರಾಜ, ರಾಘು ಪವಾರ್, ಸಂದೀಪ್ ಕಬಾಡಿ, ವಿಠ್ಠಲ್ ಬಾಕಳೆ ಮುರಳಿ ನಾಕೋಡ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

## ಉತ್ತಮ ಆಡಳಿತ ನೀಡುತ್ತೇವೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶಾಲೆಯ ಮಕ್ಕಳ ಅಭಿವೃದ್ಧಿಗಾಗಿ ಕಾಯಕ ಮಾಡುವೆ ಎಂದು ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರ ಶಾಲಾ ಪ್ರಧಾನಮಂತ್ರಿ ಕಾರ್ತಿಕ ಶಿಗ್ಗಾಂವಿ ಹೇಳಿದರು.



ಅವರು ಶಾಲಾ ಸಂಸತ್ ರಚನೆಯಲ್ಲಿ ಶಾಲಾ ಪ್ರಧಾನ ಮಂತ್ರಯಾಗಿ ಆಯ್ಕೆಯಾಗಿ ಪ್ರಮಾಣ ವಚನ ಸ್ವೀಕರಿಸಿ ಮಾತನಾಡಿ, ಗುರುಗಳ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರ ಸಹಾಯ-ಸಹಕಾರದಿಂದ ಶಾಲೆಯ ಮಕ್ಕಳ ಅಭಿವೃದ್ಧಿಗಾಗಿ ಕಾಯಕ ಮಾಡಿ ಉತ್ತಮ ಆಡಳಿತ ನೀಡಿ ಶಾಲೆಯ ಕೀರ್ತಿ ಹೆಚ್ಚಿಸುತ್ತೇವೆ ಎಂದರು.

ವಿಧಾನಸಭಾ ಚುನಾವಣೆ ಹಾಗೂ ಲೋಕಸಭಾ ಚುನಾವಣೆಯ ರೀತಿಯಲ್ಲಿ ಮತದಾನ ಪ್ರಕ್ರಿಯೆ ಮೂಲಕ ಶಾಲಾ ಸಂಸತ್ ಚುನಾವಣೆಯನ್ನು ನಡೆಸಲಾಗಿತ್ತು. ಶಾಲಾ ಉಪಪ್ರಧಾನಿಯಾಗಿ ಮಾಹಾದೇವಪ್ಪ ಕಾಗಿ, ಪ್ರಾರ್ಥನಾ ಮಂತ್ರಿಯಾಗಿ ಪ್ರಿಯಾಂಕಾ ಮಟ್ಟಿ, ಶಿಕ್ಷಣ ಮಂತ್ರಿಯಾಗಿ ಶಾಹೀದ ಖವಾಸ, ಆಹಾರ ಮಂತ್ರಿಯಾಗಿ ಶ್ರೀನಿಧಿ ಸಿದ್ದನಗೌಡರ, ರಕ್ಷಣಾ ಮಂತ್ರಿಯಾಗಿ ಚನ್ನಬಸಪ್ಪ ಅಳಗವಾಡಿ, ಕ್ರೀಡಾ ಮಂತ್ರಿಯಾಗಿ ಮಹ್ಮದ್‌ಆದೀಲ್ ಮಾಣೀಕ್‌ಬಾಯಿ, ನೀರಾವರಿ ಮಂತ್ರಿಯಾಗಿ ಮನೋಜ ಸಿದ್ದನಗೌಡರ, ಪ್ರವಾಸ ಮಂತ್ರಿಯಾಗಿ ಸಲೀಮ್‌ಅಹ್ಮದ್ ಅಣ್ಣೀಗೇರಿ, ಪರಿಸರ ಮಂತ್ರಿಯಾಗಿ ಅನ್ವರ್ ಮುಲ್ಲಾ ಪ್ರಮಾಣವಚನ ಸ್ವೀಕರಿಸಿದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಎಂ.ಎಂ. ಮೇಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್, ಮಂಜುನಾಥ ಕಲ್ಯಾಣಮಠ, ಎಚ್.ಆರ್. ಭಜೆಂತ್ರಿ, ವಿ.ಎಂ. ಕಂಠಿ, ಎಸ್.ವಿ. ಹಿರೇಮಠ, ಟಿ.ವೀಣಾ, ನಂದಾ ಮಟ್ಟಿ, ಶಾಭಾನಾ ಅಬ್ಬುನವರ, ಪವಿತ್ರಾ ಮಟ್ಟಿ, ಜ್ಯೋತಿ ಜಾಧವ ಇದ್ದರು.

## ಆಲೂರು ವೆಂಕಟರಾಯರ ಜಯಂತ್ಯುತ್ಸವ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆಯ ರೋಣ ತಾಲೂಕಾಧ್ಯಕ್ಷ ಎಂ.ಎಚ್. ನದಾಫ್ ನೇತೃತ್ವದಲ್ಲಿ ಶ್ರೀ ಆಲೂರು ವೆಂಕಟರಾಯರ ವೃತ್ತದಲ್ಲಿ ಶ್ರೀ ಆಲೂರು ವೆಂಕಟರಾಯರ 144ನೇ ಜಯಂತ್ಯುತ್ಸವವನ್ನು ನೆರವೇರಿಸಲಾಯಿತು.ಕಾರ್ಯಕ್ರಮದ ಅಂಗವಾಗಿ ಸರಕಾರಿ ಪಾಲಿಟೆಕ್ನಿಕ್‌ನ ಆವರಣದಲ್ಲಿ ಸಸಿ ನಡೆಸುವ ಕಾರ್ಯಕ್ರಮವನ್ನು ನೆರವೇರಿಸಲಾಯಿತು. ಕಾರ್ಯಕ್ರಮದಲ್ಲಿ ಶ್ರೀ ಎಚ್ಚರೇಶ್ವರ ಮಹಾಸ್ವಾಮಿಗಳು, ದಿವಾನ್ ಶರೀಫ್ ಮುರುಗೇಂದ್ರ ಶ್ರೀಗಳು, ಹಜರತ ಪೀರ್ ಶ್ರೀ ಎಮ್.ಆರ್. ಖಾನ್ ಬಾಬಾ ಗುರುಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು.

ವೇದಿಕೆಯ ಪದಾಧಿಕಾರಿಗಳಾದ ಬಸವರಾಜ್ ಹಾದಿಮನಿ, ಮುರ್ತುಜಾ ಗೌಂಡಿ, ಪ್ರಾಂಶುಪಾಲ ವಿನೋದ ಸೋನಕರ, ಶರೀಫ್ ನದಾರ್ಫ, ಸಂಕೇತ್ ದಾನರೆಡ್ಡಿ, ಸಂಜು ಮಾದರ, ಕಾರ್ತಿಕ್ ಬಡಿಗೇರ್, ಲಿಯಾಖತ್ ಅಂಗಡಗೇರಿ, ಶಂಕ್ರಪ್ಪಾ ತೆಗ್ಗಿ, ಪರಶುರಾಮ್ ನಾಯ್ಕರ್, ಯಮನೂರುಸಾಬ್ ನದಾಫ್, ಸಂತೋಷ್ ರಾಜಪುರೋಹಿತ್, ರಿಜ್ವಾನ್ ಮುಲ್ಲಾ, ಶರಣಪ್ಪ ಪೂಜಾರ, ಹನುಮಂತ್ ಗುಳೇದಗುಡ್ಡ, ಮೈಬ ನದಾರ್ಫ, ನೂರಸಾಬ ನದಾರ್ಫ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ನಿಧನ ವಾರ್ತೆ



**ವಾದಿರಾಜ ಜೋಶಿ**

ಗದಗ: ನಗರದ ಮಸಾರಿ ಸ್ಟೇಡಿಯಂ ಬಳಿಯ ನಿವಾಸಿ ವಾದಿರಾಜ ಕೃಷ್ಣಾಜಿ ಜೋಶಿ (58) ಶುಕ್ರವಾರ ನಿಧನರಾದರು. ಮೃತರು ತಮ್ಮ, ತಂಗಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

### ಶಿರಡಿ ಸಾಯಿಬಾಬಾ ಮಂದಿರದಲ್ಲಿ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ

# ಸನ್ಮಾರ್ಗದ ಜೀವನಕ್ಕೆ ಸಾಯಿ ಸಚ್ಚರಿತ್ರೆ ದಾರಿದೀಪ

■ ವಿಜಯಸಾಕ್ಷಿ ಸುದ್ದಿ, ಗದಗ

ಪಾರಮಾರ್ಥಿಕ ಮತ್ತು ಪ್ರಾಪಂಚಿಕ ಜೀವನಕ್ಕೆ ಶ್ರೀ ಸಾಯಿ ಸಚ್ಚರಿತ್ರೆ ದಾರಿದೀಪವಾಗಬಲ್ಲದು ಎಂದು ಗದುಗಿನ ಖ್ಯಾತ ವೈದ್ಯ, ಧಾರ್ಮಿಕ ಚಿಂತಕ ಡಾ. ಎಸ್.ಬಿ. ಶೆಟ್ಟರ ಹೇಳಿದರು.

ಗದಗ ಹಾತಲಗೇರಿ ರಸ್ತೆಯ ಶ್ರೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಸಮಿತಿಯಿಂದ ಗುರುಪೂರ್ಣಿಮೆ ಅಂಗವಾಗಿ ಜುಲೈ 20ರವರೆಗೆ ನಡೆಯಲಿರುವ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆಯ ಮೊದಲ ದಿನದ ಪ್ರವಚನಕ್ಕೆ ಪೀಠಿಕೆ ಹಾಕಿ ಕೆಲವು ಅಧ್ಯಾಯಗಳನ್ನು ವಿಶ್ಲೇಷಿಸಿದರು.

ಶ್ರೀ ಸಾಯಿ ಸಚ್ಚರಿತ್ರೆ ಪಠಣದಿಂದ, ಆಲಿಕೆಯಿಂದ ಪಾಪಗಳು ನಾಶವಾಗುತ್ತವೆ. ಯೋಗಿಗಳ ಜೀವನ ಆಧ್ಯಾತ್ಮಿಕ ಮತ್ತು ಸಾಧನೆಗೆ ರಾಜಮಾರ್ಗವಾಗಿವೆ. ಸಾಧಕರಿಗೆ ಯೋಗಿಗಳ ಜೀವನ ಪಾಠವೇ ಸಿಲೇಬಸ್ ಇದ್ದಂತೆ ಎಂದರು.

ಸಂಸಾರವನ್ನು ಸಾಗರಕ್ಕೆ ಹೊಲಿಕೆ ಮಾಡಲಾಗುತ್ತಿದೆ. ಈ ಮೊದಲು ಸಮುದ್ರದಲ್ಲಿ ದಿಕ್ಸೂಚಿಯಾಗಿ ಲೈಟ್‌ಹೌಸ್(ದೀಪ ಮನೆ)ಗಳು ಇರುತ್ತಿದ್ದವು. ದೀಪಮನೆಗಳ ದಿಕ್ಸೂಚಿಯನ್ನು ಅನುಸರಿಸಿ ನಾವಿಕರು ತಮ್ಮ ಹಡಗು ಚಲಿಸಬೇಕಾದ ಮಾರ್ಗವನ್ನು ನಿರ್ಧರಿಸುವ ಹಾಗೆ, ಯೋಗಿಗಳ ಜೀವನ ಕಥೆಯು ಸಂಸಾರದ ಸಾಗರದಲ್ಲಿರುವವರಿಗೆ ದಾರಿದೀಪ ಇದ್ದ ಹಾಗೆ ಎಂದರು.



ಯಾವಾಗ ನಾವು ನಮ್ಮ ಧಾರ್ಮಿಕ ಕರ್ತವ್ಯಗಳನ್ನು ಮರೆಯುತ್ತೇವೆಯೋ, ಮತೀಯ ಕಲಹಗಳು ಪ್ರಾರಂಭವಾಗುವವೋ ಆವಾಗ ಯೋಗಿಗಳು ಹುಟ್ಟಿ ಬರುವರು. ಯೋಗಿಗಳ ಮಾರ್ಗದರ್ಶನದಲ್ಲಿ ಸಮಾಜ ಸನ್ಮಾರ್ಗದೆಡೆಗೆ ಮುನ್ನಡೆಯಲು ಸಹಕಾರಿ ಎಂದರು.

ಸಾಯಿಬಾಬಾ ಧುನಿಗೆ ತಲಾ 25 ಸಾವಿರ ರೂ.ಗಳನ್ನು ದೇಣಿಗೆ ನೀಡಿದ ಸಿದ್ಧಮಲ್ಲಪ್ಪ ಶ್ರೀಶೈಲಪ್ಪ ಕಾವೇರಿ, ವೀರೇಶ ಸಾಲಿಮಠ, ತಲಾ 11 ಸಾವಿರ ರೂ.ಗಳನ್ನು ದೇಣಿಗೆ ನೀಡಿದ ರಾಮಣ್ಣ ಆರ್.ಕಾಶಪ್ಪನವರ, ರುದ್ರಪ್ಪ ಚಂದ್ರಪ್ಪ ಅರಳಿ ಹಾಗೂ ಪ್ರಸಾದ ಸೇವೆ ವಹಿಸಿಕೊಂಡಿದ್ದ ವ್ಹಿ.ಆರ್. ಕುಂಬಾರ, ರಾಮಣ್ಣ ಕಾಶಪ್ಪನವರ ಅವರನ್ನು ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ ಸಮಿತಿಯ ಅಧ್ಯಕ್ಷ ಮಹೇಶ ತಲೇಗೌಡ್ರ ಸ್ವಾಗತಿಸಿದರು. ಕಾರ್ಯದರ್ಶಿ ರವಿ ಚಿಂಚಲಿ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಸಮಿತಿಯ ಪದಾಧಿಕಾರಿಗಳು, ಸದಸ್ಯರು, ಭಕ್ತಾಧಿಗಳು ಪಾಲ್ಗೊಂಡಿದ್ದರು.

**ಧುನಿಗೆ ದೇಣಿಗೆಯ ಧ್ವನಿ**

ಶಿರಡಿಯಲ್ಲಿರುವ ಧುನಿ ಮಾದರಿಯನ್ನು ಗದುಗಿನ ಶಿರಡಿ ಬಾಬಾ ಮಂದಿರ ಬಳಿ ನಿರ್ಮಿಸಲು ಸಂಕಲ್ಪಿಸಲಾಗಿದ್ದು, ಈಗಾಗಲೇ ಭೂಮಿಪೂಜಾ ಕಾರ್ಯವೂ ಆಗಿದೆ. ಈ ಕಾರ್ಯಕ್ಕೆ ದಿ. ಗಂಗಣ್ಣ ಕೋಟಿ ಅವರು 50 ಸಾವಿರ ರೂ.ಗಳನ್ನು ದೇಣಿಗೆಯಾಗಿ ನೀಡುವ ಮೂಲಕ ದೇಣಿಗೆ ಸಂಗ್ರಹಕ್ಕೆ ಮುನ್ನುಡಿ ಬರೆದಿದ್ದಾರೆ. ಇಂತಹ ಮಹತ್ವದ ಕಾರ್ಯಕ್ಕೆ ಭಕ್ತಾಧಿಗಳು ಕೈಜೋಡಿಸಬೇಕೆಂದು ಡಾ. ಎಸ್.ಬಿ. ಶೆಟ್ಟರ ವಿನಂತಿಸಿದರು.

### ಮುಡಾ ಪ್ರಕರಣದಲ್ಲಿ ತಪ್ಪು ಮಾಡಿಲ್ಲವಾದರೆ ಭಯಪಡುವದೇಕೆ?: ಬಸವರಾಜ ಬೊಮ್ಮಾಯಿ ಪ್ರಶ್ನೆ

# ಸಿಬಿಐ ತನಿಖೆಗೆ ಹಿಂಜರಿಕೆಯೇಕೆ?

**■ವಿಜಯಸಾಕ್ಷಿ ಸುದ್ದಿ, ಗದಗ**

ಮುಡಾ ನಿವೇಶನ ಹಂಚಿಕೆ ಹಗರಣವನ್ನು ಸಿಬಿಐ ಮೂಲಕ ತನಿಖೆ ನಡೆಸಲಿ. ಯಾವುದೇ ತಪ್ಪು ಮಾಡಿಲ್ಲ ಎಂದರೆ ಭಯ ಪಡುವ ಅಗತ್ಯವಿಲ್ಲ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಡಾ ಸೈಟ್ ಹಂಚಿಕೆಯಲ್ಲಿ ಯಾವುದೇ ಹಗರಣ ಆಗಿಲ್ಲ, ಈ ಆರೋಪದಲ್ಲಿ ಯಾವುದೇ ಸತ್ಯಾಂಶವಿಲ್ಲ ಅಂದರೆ ಇಷ್ಟು ದೊಡ್ಡ ಚರ್ಚೆ ಆಗುತ್ತಿರಲಿಲ್ಲ. ಏನೂ ಇಲ್ಲ ಅಂದರೆ ಸ್ವತಂತ್ರ ಸಂಸ್ಥೆಯ ಮೂಲಕ ತನಿಖೆಗೆ ಯಾಕೆ ಹಿಂಜರಿಕೆ ವ್ಯಕ್ತವಾಗುತ್ತಿದೆ ಎಂದು ಪ್ರಶ್ನಿಸಿದರು.

ಒಂದು ಪ್ರಕರಣದ ವಿಚಾರಣೆ ಬೇರೆ, ತನಿಖೆ ಮಾಡುವುದು ಬೇರೆ. ಮುಡಾ ಹಗರಣ ತನಿಖೆಗೆ ಒಪ್ಪಿಸಬೇಕು ಎಂದು ಒತ್ತಾಯ ಮಾಡುತ್ತೇನೆ. ಮುಡಾದಲ್ಲಿ ಎಕ್ಸೆಂಜ್ ಸೈಟ್‌ಗಳು ಯಾವುದಿದೆ, ಯಾವ ಸಂದರ್ಭದಲ್ಲಿ, ಯಾರಿಗೆ ಸೈಟ್ ನೀಡಿದ್ದೀರಿ ಎನ್ನುವ ಬಗ್ಗೆ ಸಂಪೂರ್ಣ ತನಿಖೆ ಆಗಲಿ. ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಿ. ಯಾವುದೇ ಹಗರಣ ಇಲ್ಲವೆಂದಾದರೆ ಭಯಪಡುವ ಅಗತ್ಯವೇನಿದೆ ಎಂದರು.



ಈ ಹಗರಣದ ಕುರಿತು ಬಹಳ ಸ್ಪಷ್ಟವಾಗಿ ಮಾಧ್ಯಮಗಳು ತೋರಿಸಿಕೊಟ್ಟಿವೆ. ಈ ಪ್ರಕರಣದ ಕುರಿತು ಸಿಎಂ ಸಿದ್ದರಾಮಯ್ಯ ಬೇಕಾದ್ದು ಹೇಳಲಿ, ಬದಲಿ ನಿವೇಶನ ಯಾವ ಯಾವ ಲೇಔಟ್‌ನಲ್ಲಿ ಪಡೆದುಕೊಳ್ಳಬೇಕು ಎನ್ನುವ ಕಾನೂನು ಸ್ಪಷ್ಟವಾಗಿ ಉಲ್ಲಂಘನೆ ಆಗಿದೆ. ಯಾವ ಕಾನೂನು ಉಲ್ಲಂಘನೆ ಆಗಿದೆ ಎಂದು ನಮ್ಮ ಪಕ್ಷದ ನಾಯಕರು ಓದಿ ಹೇಳಿದ್ದಾರೆ. 50:50 ಯಾವ ಲೇಔಟ್‌ನಲ್ಲಿ ನೀಡಬೇಕು ಅಲ್ಲಿ ನೀಡಿಲ್ಲ. ಮೇಲ್ನೋಟಕ್ಕೆ ನಿಯಮ ಉಲ್ಲಂಘನೆ ಆಗಿದ್ದು ಸ್ಪಷ್ಟವಾಗಿದೆ. ಯಾವ ಸಂದರ್ಭದಲ್ಲಿ ಸೈಟ್ ಪಡೆದುಕೊಂಡರು, ಯಾವ ರೀತಿ ಪಡೆದುಕೊಂಡರು ಎನ್ನುವ ಪ್ರಶ್ನೆ ಇದೆ ಎಂದು ಹೇಳಿದರು.

ಪ್ರವಾಸೋದ್ಯಮ ಇಲಾಖೆಯಲ್ಲಿ ನಡೆದ ಹಗರಣದ ಕುರಿತು ಕೇಳಿದ ಪ್ರಶ್ನೆಗೆ, ಆ ಬಗ್ಗೆ ತಮಗೆ ಮಾಹಿತಿ ಇಲ್ಲ ಎಂದು ಹೇಳಿದರು.

ವಾಲ್ಮೀಕಿ ನಿಗಮದ ಹಗರಣದಲ್ಲಿ ಮಾಜಿ ಸಚಿವ ನಾಗೇಂದ್ರ ಬಂಧನ ವಿಚಾರ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಂಸದ ಬಸವರಾಜ ಬೊಮ್ಮಾಯಿ, ವಾಲ್ಮೀಕಿ ಹಗರಣದ ಬಗ್ಗೆ ಇ.ಡಿ ಸಂಸ್ಥೆ ತನಿಖೆ ಮಾಡುತ್ತಿದೆ. ಮೊದಲು, ಮಾಜಿ ಸಚಿವ ನಾಗೇಂದ್ರರ ಪಾತ್ರ ಇಲ್ಲ ಎಂದು ಕ್ಲೀನ್ ಚಿಟ್ ಕೊಟ್ಟರು. ಈಗ ನಾಗೇಂದ್ರ ಪಾತ್ರ ಇರುವುದು ಸ್ಪಷ್ಟವಾಗಿದೆ. ಈಗ ನಾಗೇಂದ್ರ ಅವರ ಬಂಧನವಾಗಿದೆ. ಶಾಸಕ ಹಾಗೂ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ಅವರ ಪಾತ್ರ ಇಲ್ಲ ಎಂದರು. ಈಗ ಅದು ಕೂಡಾ ಸಾಬೀತಾಗಿದೆ. ಈ ಪ್ರಕರಣದಲ್ಲಿ ಬಗೆದಷ್ಟೂ ವಿಚಾರಗಳು ಹೊರಬರುತ್ತಿವೆ. ಬರುವ ದಿನದಲ್ಲಿ ಹಣಕಾಸು ಇಲಾಖೆಯ ಪಾತ್ರ ಸ್ಪಷ್ಟವಾಗಲಿದೆ. ಮುಂದಿನ ತನಿಖೆಯನ್ನು ಇ.ಡಿಯವರು ತಾವೇ ಮಾಡುತ್ತಾರೆ ಎಂದರು.

## ಡಾ. ಬಿ.ಎಸ್. ರಾಠೋಡ್, ಆದೆಪ್ಪನವರಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸರ್ವೋದಯ ಶಾಲೆ ಹಾಗೂ ಎಕ್ಸಲೆಂಟ್ ಇಂಗ್ಲೀಷ್ ಮೀಡಿಯಂ ಸ್ಕೂಲ್ ಇವುಗಳ ಸಂಯೋಗದಲ್ಲಿ ವಿದ್ಯಾದಾನ ಸಮಿತಿ ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾಗಿ ಪದನ್ನೋತಿ ಹೊಂದಿದ ಕ್ಯಾಪ್ಟನ್ ಡಾ. ಬಿ.ಎಸ್. ರಾಠೋಡ್‌ರವರಿಗೆ ಸನ್ಮಾನ ಕಾರ್ಯಕ್ರಮ ಜರುಗಿತು. ಇದೇ ಸಂದರ್ಭದಲ್ಲಿ ಸೇವಾ ನಿವೃತ್ತಿ ಹೊಂದಿದ ಮುಖೋಪಾಧ್ಯಾಯ ಎಚ್.ಬಿ. ಆದೆಪ್ಪನವರ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಂಜಾರ ಅಭಿವೃದ್ಧಿ ವೇದಿಕೆ ಅಧ್ಯಕ್ಷರು ಕ್ಯಾಪ್ಟನ್ ಡಾ. ಬಿ.ಎಸ್. ರಾಠೋರವರಿಗೆ ಪದನ್ನೋತಿ ಹೊಂದಿದ್ದಕ್ಕೆ ಶುಭಾಶಯ ಕೋರಿದರು. ಸೇವಾ ನಿವೃತ್ತಿ ಹೊಂದಿದ ಎಚ್.ಬಿ. ಆದಪ್ಪನವರಿಗೆ ನಿವೃತ್ತ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು. ಕಾರ್ಯಕ್ರಮದಲ್ಲಿ ಆಡಳಿತಾಧಿಕಾರಿ ಡಿ.ಎಸ್. ಸೂರಪ್ಪಗೌಡ್ರ, ಹಿರಿಯರಾದ ಕುಬೇರಪ್ಪ ಪವಾರ, ದಾಮಲಪ್ಪ ನಾಯಕ, ರಮೇಶ ಚವ್ಹಾಣ, ಬಸವರಾಜ ಹಿರೇಹಡಗಲಿ, ಗೋಪಾಲ ಬಡಿಗೇರ, ಎಂ.ಆರ್.ಲಮಾಣಿಸರ್, ಭೋಜಪ್ಪ ಲಮಾಣಿ ಸೇರಿದಂತೆ ಶಾಲಾ ಶಿಕ್ಷಕ, ಶಿಕ್ಷಕಿಯರು ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯೆ ಪ್ರೇಮಾ ರಾಠೋಡ ಸ್ವಾಗತಿಸಿದರು. ಶಕುಂತಲಾ ರಾಠೋಡ ಕಾರ್ಯಕ್ರಮ ನಿರೂಪಿಸಿದರು.

## ಸಚಿವ ಎಚ್.ಕೆ. ಪಾಟೀಲರಿಂದ ಹಕ್ಕುಪತ್ರ ವಿತರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಗದಗನ ವಾರ್ಡ್ ನಂ. 10ರಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ನಿವೇಶನವಿರದ ಬಡ ಕುಟುಂಬಗಳಿಗೆ ಮಂಜೂರು ಮಾಡಲಾದ ಹಕ್ಕುಪತ್ರಗಳ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾ ಗ್ಯಾರಂಟಿ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಪ್ರಭು ಬುರಬುರೆ, ಇಮ್ತಿಯಾಜ್ ಶಿರಹಟ್ಟಿ ಸೇರಿದಂತೆ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು.

### ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಗೆ ಮನವಿ

# ಶಿಕ್ಷಕರ ಕನಿಷ್ಠ ಬೇಡಿಕೆಗಳನ್ನು ಈಡೇರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಹಲವಾರು ದಶಕಗಳಿಂದ ಉತ್ತರ ಕರ್ನಾಟಕದ ಖಾಸಗಿ ಶಿಕ್ಷಣ ಸಂಸ್ಥೆಗಳು ಮಠ-ಮಾನ್ಯಗಳು ಸರ್ಕಾರದಿಂದ ಅನುಮತಿ ಪಡೆದು ಹಲವಾರು ಶಿಕ್ಷಣ ಸಂಸ್ಥೆಗಳನ್ನು ತೆ-ರೆದು ಲಕ್ಷಾಂತರ ವಿದ್ಯಾರ್ಥಿಗಳ ಬಾಳಿಗೆ ಬೆಳಕಾಗಿವೆ. ಇಂತಹ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಾಂಗ ಮಾಡಿ ಎಷ್ಟೋ ಜನರು ರಾಜಕಾರಣಿಗಳಾಗಿದ್ದಾರೆ. ವಿಪರ್ಯಾಸವೆಂದರೆ, ಇಷ್ಟು ಜನರನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿದ ಶಿಕ್ಷಕರ ಕನಿಷ್ಠ ಬೇಡಿಕೆಗಳನ್ನಾದರೂ ಕೂಡಲೇ ಈಡೇರಿಸಬೇಕೆಂದು ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ, ಜಿಲ್ಲಾ ಘಟಕ ಗದಗ ಹಾಗೂ ಗದಗ ಜಿಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ವತಿಯಿಂದ ಸಚಿವ ಎಚ್.ಕೆ. ಪಾಟೀಲರ ಸಮ್ಮುಖದಲ್ಲಿ, ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.



ಸುಮಾರು ನಾಲ್ಕು ದಶಕಗಳ ಕಾಲ ಹೋರಾಟ, ಮುಷ್ಕರ ಹಾಗೂ ಸಭೆಗಳ ಮುಖಾಂತರ ದಾಖಲೆಯನ್ನು ಸ್ಥಾಪಿಸಿರುವ ಬಸವರಾಜ ಹೊರಟ್ಟಿಯವರು ಹಲವಾರು ಸಭೆಗಳನ್ನು ಮಾಡಿ ಈಗಾಗಲೇ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಈ ದಿಶೆಯಲ್ಲಿ ಆದಷ್ಟು ಬೇಗ ಈ ಬೇಡಿಕೆಗಳನ್ನು ಈಡೇರಿಸಬೇಕೆಂದು ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಪತ್ರವನ್ನು ಅರ್ಪಿಸಿದರು.

ಪ್ರಮುಖ ಬೇಡಿಕೆಗಳಾದ ಎನ್.ಪಿ.ಎಸ್. ರದ್ದುಗೊಳಿಸಿ ಓ.ಪಿ.ಎಸ್. ಜಾರಿಗೆ ತರುವುದು, ಅನುದಾನಿತ ಶಾಲಾ-ಕಾಲೇಜುಗಳಲ್ಲಿ 2015ರಿಂದ ಖಾಲಿ ಇರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡುವುದು, ಜ್ಯೋತಿ ಸಂಜೀವಿನಿ ಆರೋಗ್ಯ ವಿಮೆ ಯೋಜನೆಯನ್ನು ಖಾಸಗಿ ಶಿಕ್ಷಕ ಸಿಬ್ಬಂದಿಯವರಿಗೆ ನೀಡುವುದು, ಕಾಲ್ಪನಿಕ ವೇತನ ಬಡ್ತಿಯನ್ನು ತಕ್ಷಣದಿಂದ ಜಾರಿಗೆ ತರುವುದು, 1995ರ ನಂತರ ಪ್ರಾರಂಭವಾಗಿರುವ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸುವುದು, ಅನುಮೋದನೆಗೊಂಡ 93 ಚಿತ್ರಕಲಾ ಶಿಕ್ಷಕರನ್ನು ಅನುದಾನಕ್ಕೆ ಒಳಪಡಿಸುವುದು, ಬೋಧಕೇತರ ಸಿಬ್ಬಂದಿಯನ್ನು ಅನುದಾನಿತ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ತುಂಬಿಕೊಳ್ಳಲು ಅನುಮತಿ ನೀಡುವುದು.

ಈ ಸಂದರ್ಭದಲ್ಲಿ ಎಸ್.ವಿ. ಸಂಕನೂರ, ಶಿವಾನಂದ ಪವಾಡಶೆಟ್ಟಿ, ಪುನೀತ ಬೆನಕನವಾರಿ, ರವಿ ದಂಡಿನ, ಶ್ರೀನಿವಾಸ ಹುಯಿಲಗೋಳ, ಗದಗ ಜಿಲ್ಲಾ ಸಂಘದ ಅಧ್ಯಕ್ಷ ಎಮ್.ಕೆ. ಲಮಾಣಿ, ಎ.ಎಸ್. ಪಾಟೀಲ, ಆರ್.ಬಿ. ದಂಡಿನ, ಎಲ್.ಎಸ್. ಅರಳಹಳ್ಳಿ, ಎಮ್.ಸಿ. ಕಟ್ಟಿಮನಿ, ಬಿ.ಎಮ್. ಯರಗುಪ್ಪ, ಬಿಜ್ಜೂರ ಎಸ್.ಎಚ್, ಬಿ.ಸಿ. ಗುಳೇದ, ಝುಡ್. ಎಮ್. ಖಾಜಿ, ಉಮೇಶ ಹಿರೇಮಠ, ಬಿ.ಎಮ್. ಜವಳಿ, ದಾನೇಶ ನಾಯಕ, ಬಸವರಾಜ ಕೊರ್ಲಹಳ್ಳಿ, ಆರ್.ಸಿ. ಶಿರೋಳ, , ಎಮ್.ಎಸ್. ಮಲ್ಲಾಪೂರ, ಬಿ.ಡಿ. ಯರಗೊಪ್ಪ, ಡಿ.ಎನ್. ಮರಡ್ಡಿ, ಪಿ.ಎನ್. ಹಿರೇಮಠ, ಟಿ.ಆರ್. ನಾಯಕ ಮುಂತಾದವರು ಉಪಸ್ಥಿತರಿದ್ದರು.

### ಧಾರವಾಡ ಜಿಲ್ಲಾ ಆಸ್ಪತ್ರೆ ಡೆಂಘೀ ವಾರ್ಡ್‌ಗೆ ಸಚಿವ ಸಂತೋಷ ಲಾಡ್ ದಿಢೀರ್ ಭೇಟಿ

# ದೂರು ಬರದಂತೆ ಕರ್ತವ್ಯ ನಿರ್ವಹಿಸಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ರಾಜ್ಯ ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಶುಕ್ರವಾರ ಧಾರವಾಡ ಜಿಲ್ಲಾ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ, ಡೆಂಘೀ ವಾರ್ಡ್‌ನಲ್ಲಿ ದಾಖಲಾಗಿರುವ ರೋಗಿಗಳ ಆರೋಗ್ಯ, ಸೂಕ್ತ ಚಿಕಿತ್ಸೆ ಕುರಿತು ವಿಚಾರಿಸಿದರು.

ಜಿಲ್ಲಾಸ್ಪತ್ರೆಯ ಡೆಂಘೀ ವಾರ್ಡ್, ಎಲುಬು-ಕಿಲು ವಾರ್ಡ್, ಮಕ್ಕಳ ವಾರ್ಡ್ ಮತ್ತು ಫಾರ್ಮಸಿ ಕೇಂದ್ರಗಳಿಗೆ ಭೇಟಿ ನೀಡಿ, ಪರಿಶೀಲಿಸಿದರು. ವಾರ್ಡ್‌ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿವಿಧ ತಾಲೂಕು, ಗ್ರಾಮಗಳ ರೋಗಿಗಳನ್ನು ಸ್ವತಃ ಮಾತಾಡಿಸಿ, ವೈದ್ಯರ ಸ್ಪಂದನೆ ಮತ್ತು ಸಕಾಲಕ್ಕೆ ಅಗತ್ಯ ಚಿಕಿತ್ಸೆ ನೀಡುತ್ತಿರುವ ಕುರಿತು ಮಾಹಿತಿ ಪಡೆದುಕೊಂಡರು. ಜಿಲ್ಲಾ ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಡಿಎಸ್ ಸೇರಿದಂತೆ ಹಿರಿಯ ವೈದ್ಯಾಧಿಕಾರಿಗಳು ಪ್ರತಿದಿನ ವಾರ್ಡಗಳಿಗೆ ಭೇಟಿ ನೀಡಿ, ರೋಗಿಗಳಿಗೆ ಸಕಾಲಕ್ಕೆ ಅಗತ್ಯ ಚಿಕಿತ್ಸೆ, ಔಷಧಿ ಸಿಗುತ್ತಿರುವ ಬಗ್ಗೆ ಖಾತರಿಪಡಿಸಿಕೊಳ್ಳಬೇಕು. ರೋಗಿಗಳ ಅಹವಾಲುಗಳಿದ್ದರೆ ಆಲಿಸಬೇಕು. ರೋಗಿಗಳಿಗೆ ಅಗತ್ಯ ಸೇವೆ ಸಿಗದ ಬಗ್ಗೆ ದೂರು ಬಂದಲ್ಲಿ ಕಠಿಣ ಕ್ರಮಕೈಗೊಳ್ಳವುದಾಗಿ ಸಚಿವರು ವೈದ್ಯರಿಗೆ ಎಚ್ಚರಿಕೆ ನೀಡಿದರು. ವಿಶೇಷ ಅಭಿವೃದ್ಧಿ ಯೋಜನೆಯಡಿ ರಾಜ್ಯ ಸರಕಾರದಿಂದ ಈಗಾಗಲೇ 9.9 ಕೋಟಿ ರೂ ಅನುದಾನ ಬಿಡುಗಡೆ ಆಗಿದ್ದು, ಆರೋಗ್ಯ ಇಲಾಖೆಯ ಬೆಂಗಳೂರು ಕೇಂದ್ರ ಕಚೇರಿಯಲ್ಲಿ ಟೆಂಡರ್ ಹಂತದಲ್ಲಿದೆ. ಅದನ್ನು ಬೇಗ ಪೂರ್ಣಗೊಳಿಸಿ, ಕ್ರಿಯಾಯೋಜನೆಯಲ್ಲಿರುವ ಎಸ್.ಟಿ.ಪಿ ನಿರ್ಮಾಣ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಕಾಮಗಾರಿ ಆರಂಭಿಸಬೇಕೆಂದು ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ಸಚಿವರು ನಿರ್ದೇಶಿಸಿದರು.

ಧಾರವಾಡ ಜಿಲ್ಲಾಸ್ಪತ್ರೆಗೆ ಉತ್ತರ-ಕನ್ನಡ, ಬೆಳಗಾವಿ, ಗದಗ, ಬಾಗಲಕೋಟ, ಹಾವೇರಿ ಜಿಲ್ಲೆಗಳಿಂದ ರೋಗಿಗಳು ಚಿಕಿತ್ಸೆಗಾಗಿ ಬರುತ್ತಾರೆ. ಧಾರವಾಡ



ಜಿಲ್ಲೆಯ ಜೊತೆಗೆ ಹೊರ ಜಿಲ್ಲೆಗಳ ರೋಗಿಗಳನ್ನು ಸೂಕ್ತ ಚಿಕಿತ್ಸೆ ನೀಡಿ, ನಿಭಾಯಿಸುವ ಜವಾಬ್ದಾರಿ ಇದೆ. ಸರಕಾರದ ಅನುದಾನದೊಂದಿಗೆ ವಿವಿಧ ಕೈಗಾರಿಕೆಗಳ ಸಿಎಸ್‌ಆರ್ ನಿಧಿ ಪಡೆದು, ಆಸ್ಪತ್ರೆಗೆ ಹೆಚ್ಚುವರಿ ಸೌಲಭ್ಯ ಕಲ್ಪಿಸಬೇಕು. ಈ ಕುರಿತು ಸೂಕ್ತ ಯೋಜನೆ ರೂಪಿಸಿ, ಸಲ್ಲಿಸುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಜಿಲ್ಲಾ ಆಸ್ಪತ್ರೆಯ ಡೆಂಘೀ ವಾರ್ಡ್‌ನಲ್ಲಿ ಮಹಿಳೆ, ಮಕ್ಕಳು, ವಯಸ್ಕರು ಸೇರಿ 49 ಜನ ಡೆಂಘೀ ಶಂಕಿತರು ದಾಖಲಾಗಿದ್ದಾರೆ. ಇವರಲ್ಲಿ ಮೂರು ಜನರಿಗೆ ಡೆ-ಂಘೀ ಖಚಿತಪಟ್ಟಿದ್ದು, ಸೂಕ್ತ ಚಿಕಿತ್ಸೆಯೊಂದಿಗೆ ಆರೋಗ್ಯ ಸ್ಥಿರವಾಗಿದೆ. ಉಳಿದ ಎಲ್ಲ ರೋಗಿಗಳು ಗುಣಮುಖರಾಗುತ್ತಿದ್ದಾರೆ ಎಂದು ಹೇಳಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶಶಿ ಪಾಟೀಲ ಅವರು, ಜಿಲ್ಲೆಯಲ್ಲಿ ಇಲ್ಲಿಯವರೆಗೆ 1765 ಜನರಿಗೆ ಡೆಂಘೀ ಪರೀಕ್ಷೆ ಮಾಡಲಾಗಿದೆ. 334 ಜನರಲ್ಲಿ ಸೋಂಕು ಧೃಡಪಟ್ಟಿದ್ದು, ಸೂಕ್ತ ಚಿಕಿತ್ಸೆ ನೀಡಿ ಅವರನ್ನು ಗುಣಮುಖರನ್ನಾಗಿಸಲಾಗಿದೆ ಎಂದು ಸಚಿವರಿಗೆ ತಿಳಿಸಿದರು. ಸಚಿವರ ಭೇಟಿ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾಸ್ಪತ್ರೆ ತಜ್ಞ ವೈದ್ಯರಾದ ಡಾ. ಶ್ರೀಧರ ಪಾಟೀಲ, ಡಾ. ಶಿಲ್ಪಾ ಭಟ್, ಡಾ. ಪ್ರಭು ಸಂಗಮ ಸೇರಿದಂತೆ ವಿವಿಧ ತಜ್ಞ ವೈದ್ಯರು, ಸ್ನಾತಕೊತ್ತರ ವೈದ್ಯ ವಿದ್ಯಾರ್ಥಿಗಳು, ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಜಿಲ್ಲಾ ಆಸ್ಪತ್ರೆಗೆ ಪ್ರತಿದಿನ ಸುಮಾರು 1500 ಜನ ಹೊರ ರೋಗಿಗಳು ನೋಂದಣಿ ಆಗುತ್ತಾರೆ. ಸರಾಸರಿ ತಿಂಗಳಿಗೆ 28 ಸಾವಿರ ರೋಗಿಗಳು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಾರೆ. ಒತ್ತಡದ ಮಧ್ಯೆಯೂ ವೈದ್ಯರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಜಿಲ್ಲಾ ಆಸ್ಪತ್ರೆಗೆ ಔಷಧಿ, ಮೂಲಸೌಕರ್ಯಗಳ ಕೊರತೆ ಆಗದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ. ಜಿಲ್ಲಾ ಆಸ್ಪತ್ರೆಯ ಅಭಿವೃದ್ಧಿಗಾಗಿ ಅಗತ್ಯ ಸೌಲಭ್ಯಗಳ ಕುರಿತು ಸಚಿವರಿಗೂ ಮತ್ತು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದರು.



## ರೈತರೊಂದಿಗೆ ಸಂವಾದ ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

ಮೆಕ್ಕೆಜೋಳಕ್ಕೆ ತಗಲುವ ಲದ್ದಿ ಹುಳದ ರೋಗಕ್ಕೆ ಇಮಾಮ ಹೆಕ್ಟೀನ್ ಬೆಂಜೋಇಟ್ ಕೀಟನಾಶಕವನ್ನು ಒಂದು ಲೀಟರ್ ನೀರಿಗೆ 2 ಗ್ರಾಂನಂತೆ ಬೆರೆಸಿ ಬೆಳೆಗಳಿಗೆ ಸಿಂಪಡಿಸಬೇಕು ಎಂದು ಉಪ ಕೃಷಿ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್. ರೈತರಿಗೆ ತಿಳಿಸಿದರು.

ಅವರು ಇತ್ತೀಚೆಗೆ ತಾಲೂಕಿನ ಹಂಗನಕಟ್ಟಿ ಗ್ರಾಮದ ರೈತರ ಹೊಲಗಳಿಗೆ ಭೇಟಿ ನೀಡಿ ಮಾಹಿತಿ ನೀಡಿದರು.

ಹೆಸರುಬೆಳೆಯ ರೋಗ ನಿಯಂತ್ರಿಸಲು ರೋಗಪೀಡಿತ ಗಿಡವನ್ನು ಕಿತ್ತು ಭೂಮಿಯ ಆಳದಲ್ಲಿ ಹೂತು ಹಾಕಬೇಕು ಎಂದರಲ್ಲದೆ, ಕೃಷಿ ಇಲಾಖೆ ಯಾವಾಗಲೂ ರೈತರ ಪರವಾಗಿ ಕೆಲಸ ಮಾಡುತ್ತದೆ. ರೈತರು ಇಲಾಖೆಯೊಂದಿಗೆ ಸಹಯೋಗ ನೀಡಿ ಸಹಕರಿಸಬೇಕು ಎಂದು ಕೋರಿದರು.

ಸಹಾಯಕ ಕೃಷಿ ಅಧಿಕಾರಿಗಳಾದ ಎಫ್.ಸಿ. ಗುರಿಕಾರ ಮಾತನಾಡಿ, ರೈತರು ಕೃಷಿ ಇಲಾಖೆಯ ವಿವಿಧ ಯೋಜನೆಯನ್ನು ಪಡೆಯಲು ಬೆಳೆ ಸಮೀಕ್ಷೆ ಕಡ್ಡಾಯವಾಗಿರುತ್ತದೆ. ಆದ್ದರಿಂದ ರೈತರು ರೈತರಿಗಾಗಿಯೇ ಇರುವ ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ಬೆಳೆಯ ಸಮೀಕ್ಷೆಯನ್ನು ಮಾಡಬೇಕು ಎಂದು ವಿನಂತಿಸಿದರು.

ಕೃಷಿ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ರೈತರೊಂದಿಗೆ ಸಮಾಲೋಚನೆ ನಡೆಸಲಾಯಿತು. ಗ್ರಾಮ ಪಂಚಾಯತ್ ಸದಸ್ಯರಾದ ಬಸವರಾಜ ಖಾನಾಪುರ್, ಪ್ರಗತಿಪರ ರೈತ ಈರಣ್ಣ ಗದ್ದಿ ಸೇರಿದಂತೆ ಗ್ರಾಮದ ರೈತರು, ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka